ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 89 RNI Number : KNKAN/25/A2770 08-04-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :89 ರಾಯಚೂರು 08-04-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

2028ರಲ್ಲೂ ಸಿದ್ದರಾಮಯ್ಯನವರೇ ಸಿಎಂ ಎಂದ ಜಮೀರ್ ವಿರುದ್ಧ ಕಾಂಗ್ರೆಸ್‌ನಲ್ಲಿ ಅಸಹನೆ

ಬೆಂಗಳೂರು, ಏ.7-

ಸಿದ್ದರಾಮಯ್ಯ ಅವರು 2028ರ ವಿಧಾನಸಭೆ ಚುನಾವಣಾ ಬಳಿಕವೂ 3ನೇ ಅವಧಿಗೆ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಹೇಳಿರುವ ವಸತಿ ಸಚಿವ ಜಮೀರ್ ಅಹಮದ್ ಖಾನ್ ವಿರುದ್ಧ ಕಾಂಗ್ರೆಸ್‌ನಲ್ಲಿ ಅಸಹನೆ ಮಾತುಗಳು ಕೇಳಿ ಬರಲಾರಂಭಿಸಿವೆ.

ಸಚಿವ ಜಮೀರ್ ಅವರು ತಮಗೆ ವಹಿಸಿದ ಜವಾಬ್ದಾರಿ ಹೊರತುಪಡಿಸಿ ಉಳಿದೆಲ್ಲಾ ವಿಚಾರಗಳಲ್ಲೂ ಮೂಗು ತೂರಿಸುತ್ತಿದ್ದಾರೆ. ಪದೇಪದೇ ನಾಯಕತ್ವದ ವಿವಾದವನ್ನು ಕೆಣಕುವ ಮೂಲಕ ಹೈಕಮಾಂಡ್ ನಾಯಕರಿಗೆ ಸಡ್ಡು ಹೊಡೆಯುತ್ತಿದ್ದಾರೆ. ಅವರನ್ನು ಸಂಪುಟದಿಂದ ಕೈ ಬಿಡಬೇಕು ಎಂದು ಉಪಮುಖ್ಯಮಂತ್ರಿಯವರ ಆಪ್ತ ಬಣ ದೆಹಲಿ ನಾಯಕರ ಮೇಲೆ ಒತ್ತಡ ಹೇರಲು ಮುಂದಾಗಿದೆ.

ವಿಧಾನಸಭೆಯ ಉಪಚುನಾವಣೆ ಮುಗಿದ ಬಳಿಕ ಡಿ.ಕೆ.ಶಿವಕುಮಾರ್ ಅವರನ್ನು ಬೆಂಬಲಿಸುವ ಶಾಸಕರ ನಿಯೋಗ ದೆಹಲಿಗೆ ತೆರಳಲಿದ್ದು, ಡಿ.ಕೆ.ಶಿವಕುಮಾರ್ ಅವರಿಗೆ ಅಧಿಕಾರ ಹಸ್ತಾಂತರ ಮಾಡಬೇಕು ಎಂದು ಪ್ರತಿಪಾದಿಸಲಿದೆ. ಒಂದು ವೇಳೆ ನಾಯಕತ್ವ ಬದಲಾವಣೆಯಾಗದೇ ಇದ್ದರೆ ಸಂಪುಟ ಪುನರ್‌ರಚನೆಯಲ್ಲಿ ಸಚಿವ ಜಮೀರ್ ಅಹಮದ್ ಖಾನ್ ಅವರನ್ನು ಕೈ ಬಿಡಬೇಕೆಂಬ ಪ್ರಮುಖ ಬೇಡಿಕೆಯನ್ನು ಮಂಡಿಸಲಿದೆ.

ಜಮೀರ್ ಅಹಮದ್ ಖಾನ್ ಅವರು ಪದೇಪದೇ ಸಿದ್ದರಾಮಯ್ಯ ಅವರ ಪರವಾಗಿ ವಕಾಲತ್ತು ವಹಿಸುತ್ತಿರುವುದು ಕಾಂಗ್ರೆಸ್‌ನ ಒಂದು ಬಣಕ್ಕೆ ನುಂಗಲಾರದ ಬಿಸಿ ತುಪ್ಪವಾಗಿದೆ. ಈ ಮೊದಲು ತುಮಕೂರಿನ ಕೆ.ಎನ್.ರಾಜಣ್ಣ ಇದೇ ರೀತಿ ಪದೇಪದೇ ಹೇಳಿಕೆ ನೀಡುವ ಮೂಲಕ ಗುಂಪುಗಾರಿಕೆಗೆ ಪ್ರಯತ್ನಿಸಿದರು. ಸೂಕ್ತ ಸಮಯ ನೋಡಿ ರಾಜಣ್ಣ ಅವರನ್ನು ಸಂಪುಟದಿಂದ ವಜಾಗೊಳಿಸುವಲ್ಲಿ ಒಂದು ಬಣ ಯಶಸ್ವಿಯಾಗಿತ್ತು.



ಜಮೀರ್ ಅಹಮದ್ ಖಾನ್ ಜನತಾದಳದಿಂದ ಕಾಂಗ್ರೆಸ್‌ಗೆ ವಲಸೆ ಬಂದ ನಾಯಕರಾಗಿದ್ದು, ಕಾಂಗ್ರೆಸ್‌ನ ಮೂಲ ಮುಸ್ಲಿಂ ನಾಯಕರಿಗಿಂತಲೂ ಹೆಚ್ಚಿನ ಅಧಿಕಾರ ಮತ್ತು ಅವಕಾಶಗಳನ್ನು ಪಡೆದುಕೊಂಡಿದ್ದಾರೆ. ಚುನಾವಣಾ ವಿಚಾರಗಳು ಬಂದಾಗ ತಾವು ಇಲ್ಲದೇ ಇದ್ದರೆ ಕಾಂಗ್ರೆಸ್‌ಗೆ ಅಲ್ಪಸಂಖ್ಯಾತರ ಬೆಂಬಲ ದೊರೆಯುವುದಿಲ್ಲ ಎಂಬ ರೀತಿಯಲ್ಲಿ ವರ್ತಿಸಿರುವುದು ಪಕ್ಷದ ಮೂಲ ನಿವಾಸಿಗಳಿಗೆ ನುಂಗಲಾರದ ಬಿಸಿ ತುಪ್ಪವಾಗಿದೆ.

ಈ ಹಿನ್ನೆಲೆಯಲ್ಲಿ ಜಮೀರ್ ಅಹಮದ್ ಖಾನ್ ಅವರನ್ನು ಗುರಿಯಾಗಿಸಿ ಕಾರ್ಯಾಚರಣೆ ನಡೆಸಲು ಕೆಲವರು ದೆಹಲಿಯತ್ತ ಮುಖ ಮಾಡಿದ್ದಾರೆ. ಚುನಾವಣೆಯ ಸಂದರ್ಭದಲ್ಲಿ ಗೊಂದಲಕಾರಿ ಹೇಳಿಕೆಗಳ ಮೂಲಕ ಜಮೀರ್ ಅಹಮದ್ ಖಾನ್ ಪಕ್ಷಕ್ಕೆ ಹಾನಿ ಮಾಡಿದ್ದಾರೆ ಎಂದು ಪ್ರತಿಪಾದಿಸಲು ಪ್ರಯತ್ನಿಸಲಾಗುತ್ತಿದೆ.

ತಮ್ಮ ವಿರುದ್ಧ ರಾಜಕೀಯ ಷಡ್ಯಂತ್ರಗಳು ನಡೆಯುತ್ತಿವೆ ಎಂಬ ಅರಿವಿದ್ದರೂ, ಜಮೀರ್ ಅಹಮದ್ ಖಾನ್, ಸಿದ್ದರಾಮಯ್ಯಅವರ ಪರವಾಗಿ ವಕಾಲತ್ತು ವಹಿಸುವುದನ್ನು ನಿಲ್ಲಿಸಿಲ್ಲ.

2023ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದರೆ ಸಿದ್ದರಾಮಯ್ಯ ಅವರು ಮತ್ತೆ ಮುಂದಿನ ಮುಖ್ಯಮಂತ್ರಿ ಎಂದು ಹೇಳುವ ಮೂಲಕ ಜಮೀರ್ ಅಹಮದ್ ಖಾನ್ ಗೊಂದಲ ಮೂಡಿಸಿದರು. ಅನಂತರ ಸರ್ಕಾರ ತನ್ನ ಪಾಡಿಗೆ ತಾನು ನಡೆಯುತ್ತಿದ್ದಾಗ ಮುಂದಿನ 5 ವರ್ಷಗಳ ವರೆಗೂ ಸಿದ್ದರಾಮಯ್ಯ ಅವರೇ ಅಧಿಕಾರದಲ್ಲಿರುತ್ತಾರೆ. ಕಾಂಗ್ರೆಸ್ ಪಕ್ಷಕ್ಕೆ ಸಿದ್ದರಾಮಯ್ಯ ಇಲ್ಲದೇ ಹೋದರೆ ನೆಲೆ ಇಲ್ಲ ಎಂಬ ಅರ್ಥದಲ್ಲಿ ಹಲವಾರು ಬಾರಿ ಮಾತನಾಡಿ, ಮುಜುಗರ ಉಂಟುಮಾಡಿದ್ದರು.

ಕಾಂಗ್ರೆಸ್ ಹೈಕಮಾಂಡ್ ನಾಯಕರೇ ಜಮೀರ್ ಅವರಿಗೆ ನೇರವಾಗಿ ಎಚ್ಚರಿಕೆ ನೀಡಿದ್ದರು. ಒಂದಷ್ಟು ದಿನ ತಣ್ಣಗಿದ್ದ ಜಮೀರ್ ಮತ್ತೆ ಚುನಾವಣಾ ಕಣದಲ್ಲಿ ನಾಯಕತ್ವದ ವಿವಾದವನ್ನು ಕೆಣಕಿದ್ದಾರೆ. 2028ರ ವರೆಗೆ ಸಿದ್ದರಾಮಯ್ಯ ಅವರ ನಾಯಕತ್ವ ಅಬಾಧಿತ ಎಂಬ ಹೇಳಿಕೆಗಳೇ ಸಾಕಷ್ಟು ಗೊಂದಲ ಮೂಡಿಸುತ್ತಿವೆ. ಅಂತಹದರಲ್ಲಿ 2028ರ ನಂತರವೂ ಮತ್ತೆ ಮೂರನೇ ಬಾರಿಗೆ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಜಮೀರ್ ಅಹಮದ್ ಖಾನ್ ಹೇಳಿರುವುದು ಭಾರೀ ಚರ್ಚೆಗೆ ಗ್ರಾಸವಾಗಿದೆ.

ಕಾರ್ಮಿಕ ಇಲಾಖೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

ಬಾಲ್ಯ ಕಾರ್ಮಿಕ ಪದ್ಧತಿ ತಡೆಗೆ ವಿವಿಧ ಇಲಾಖೆಗಳು ಸಹಕಾರ ನೀಡಿ: ಎಡಿಸಿ ಶಿವಾನಂದ

ರಾಯಚೂರು ಏಪ್ರಿಲ್ 07

ಬಾಲ ಕಾರ್ಮಿಕ ಪದ್ದತಿಯು ಒಂದು ಸಾಮಾಜಿಕ ಪಿಡುಗಾಗಿದ್ದು ಇದರ ನಿರ್ಮೂಲನೆ ಎಲ್ಲರೂ ಕೈಜೋಡಿಸಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಧಿಸಿದ ವಿವಿಧ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಏಪ್ರಿಲ್ 07ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ದತಿಯನ್ನು ನಿರ್ಮೂಲನೆ ಮಾಡಲು ಎಲ್ಲಾ ಇಲಾಖೆಗಳ ಸಹಕಾರ ಹಾಗೂ ಸಮನ್ವಯದ ಅಗತ್ಯವಿದೆ. ಆದ್ದರಿಂದ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯ್ದೆಯಡಿ ಅಧಿಸೂಚಿಸಲ್ಪಟ್ಟ ಹನ್ನೊಂದು ಇಲಾಖೆಗಳ ಅಧಿಕಾರಿಗಳು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ತಪಾಸಣೆ ಅಥವಾ ಹಠಾತ್ ದಾಳಿ ಕೈಗೊಳ್ಳುವ ಸಂದರ್ಭಗಳಲ್ಲಿ ತಂಡದೊದಿಗೆ ಸಕ್ರಿಯವಾಗಿ ಭಾಗವಹಿಸಿ ಮಕ್ಕಳ ರಕ್ಷಣೆ ಹಾಗೂ ಪುನರ್‌ವಸತಿಗಾಗಿ ಕ್ರಮ ಕೈಗೊಂಡು ಈ ಮಕ್ಕಳನ್ನು ಕೆಲಸಕ್ಕೆ



ನೇಮಿಸಿಕೊಂಡ ಮಾಲೀಕರ ವಿರುದ್ಧ ಸಂಬಧಪಟ್ಟ ಪೊಲೀಸ್ ಠಾಣೆಗಳಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ ಹಾಗೂ ತಿದ್ದುಪಡಿ ಕಾಯ್ದೆಯಡಿ ಪ್ರಕರಣ ದಾಖಲಿಸಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಕಾರ್ಮಿಕ ಇಲಾಖೆ ಅಧಿಕಾರಿಗಳು ನಿಯಮಿತವಾಗಿ ತಪಾಸಣೆ ನಡೆಸಿ ಬಾಲ ಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿ ಕಲ್ಪಿಸಬೇಕು. ಗ್ಯಾರೇಜ್, ಕಾರ್ಖಾನೆ, ಹೋಟೆಲ್, ಅಂಗಡಿ, ಮತ್ತಿತರ ಅಪಾಯಕಾರಿ ಉದ್ಯೋಗದ ಸ್ಥಳಗಳಲ್ಲಿ ತಪಾಸಣೆ ಹೆಚ್ಚಿಸಬೇಕು. ತಪಾಸಣೆ ತೀವ್ರವಾದರೆ ಬಾಲ ಕಾರ್ಮಿಕರನ್ನು ಕೆಲಸದಲ್ಲಿ ತೊಡಗಿಸಿಕೊಳ್ಳಲು ಉದ್ಯೋಗದಾತರು ಹೆದರುತ್ತಾರೆ. ಪತ್ತೆ ಹಚ್ಚಿದ ಬಾಲ ಕಾರ್ಮಿಕರಿಗೆ ಪುನರ್ವಸತಿ ಕಲ್ಪಿಸಿ ಮುಖ್ಯವಾಹಿನಿಗೆ ತಂದರೆ ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಬಾಲ ಕಾರ್ಮಿಕರ ನಿಷೇಧ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿದರೆ ಮಕ್ಕಳು ಬಾಲ ಕಾರ್ಮಿಕರಾಗುವುದನ್ನು ತಪ್ಪಿಸಬಹುದು. ಇಲ್ಲವಾದರೆ ಮಕ್ಕಳು ಕೊನೆಯವರೆಗೂ ಕಾರ್ಮಿಕರಾಗಿಯೇ ಉಳಿದುಬಿಡುತ್ತಾರೆ. ಬಾಲಕಾರ್ಮಿಕತೆ ಅಥವಾ ಬಿಡುಗಡೆಗೊಳಿಸಿದ ಮಕ್ಕಳ ಕುಟುಂಬಗಳಿಗೆ ಸಾಮಾಜಿಕ ಭದ್ರತೆ ಯೋಜನೆಯ ಸೌಲಭ್ಯಗಳನ್ನು ಒದಗಿಸುವ ಮುಖಾಂತರ ಈ ಮಕ್ಕಳ ಕುಟುಂಬಗಳನ್ನು ಆರ್ಥಿಕವಾಗಿ ಸದೃಡರನ್ನಾಗಿಸಲು ವಿವಿಧ ಸೌಲಭ್ಯಗಳನ್ನು ಒದಗಿಸಲು ಸಂಬಧಿಸಿದ ಅಧಿಕಾರಿಗಳಿಗೆ ಇಲಾಖೆಯಿಂದ ಸೂಕ್ತ

3ನೇ ಪುಟಕ್ಕೆ

ಲಿಂಗಸುಗೂರು ಎಮ್.ಸಿ.ಹೆಚ್ ಆಸ್ಪತ್ರೆ: ವಿವಿಧ ಹುದ್ದೆಗಳ ಆಯ್ಕೆ ನೇರ ಸಂದರ್ಶನ

ರಾಯಚೂರು ಏಪ್ರಿಲ್ 07

ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲೂಕಿನಲ್ಲಿ ನೂತನವಾಗಿ ನಿರ್ಮಾಣಗೊಂಡ 100 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ರೋಷ್ಟರ್ ಮತು ಮೇರಿಟ್ ಆಧರಿಸಿ ಎನ್.ಹೆಚ್.ಎಮ್ ನಿಬಂಧನೆಗೊಳಪಟ್ಟು ಅರ್ಹ ಅಭ್ಯರ್ಥಿಗಳಿಂದ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ನೇರ ಸಂದರ್ಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಸ್ತ್ರೀರೋಗ ತಜ್ಞ 01 ಹುದ್ದೆಗೆ ಎಂ.ಬಿ.ಬಿ.ಎಸ್. ಎಂ.ಎಸ್ ಓಬಿಜಿ ವಿದ್ಯಾರ್ಹತೆ ಹೊಂದಿರಬೇಕು. 45 ವರ್ಷದೊಳಗಿರಬೇಕು. ಜನರಲ್ ಮೆಡಿಸಿನ್ 01 ಹುದ್ದೆಗೆ ಎಂ.ಬಿ.ಬಿ.ಎಸ್ ಡಿ.ಸಿ.ಹೆಚ್, ಎಂ.ಡಿ ಪೀಡಿಯಾಟ್ರಿಕ್, ಡಿಎನ್ ಬಿ ಪೀಡಿಯಾಟ್ರಿಕ್ ವಿದ್ಯಾರ್ಹತೆ ಹೊದಿರಬೇಕು. 45 ವರ್ಷದೊಳಗಿರಬೇಕು. ವೈದ್ಯಾಧಿಕಾರಿ 03 ಹುದ್ದೆಗೆ ಎಂ.ಬಿ.ಬಿ.ಎಸ್ ವಿದ್ಯಾರ್ಹತೆ ಹೊಂದಿರಬೇಕು. 45 ವರ್ಷದೊಳಗಿರಬೇಕು. ಈ ಹುದ್ದೆಗಳಿಗೆ ಎನ್.ಹೆಚ್.ಎಂ ಮಾರ್ಗಸೂಚಿಗಳ ಪ್ರಕಾರ ದಿನಾಂಕ: 10-04-2026 ರಂದು ವಾಕ್-ಇನ್ ಸಂದರ್ಶನ ನಡೆಸಲಾಗುವುದು.


ಸ್ಟಾಫ್ ನರ್ಸ್ 28 ಹುದ್ದೆಗಳಿಗೆ ಜಿ.ಎನ್.ಎಂ ಅಥವಾ ಬಿ.ಎಸ್.ಸಿ ನರ್ಸಿಂಗ್ + 2 ವರ್ಷ ಅನುಭವದ ಎನ್.ಹೆಚ್.ಎಂ ಮಾರ್ಗಸೂಚಿಗಳ ಪ್ರಕಾರ ಮಾರ್ಗಸೂಚಿಗಳ ಪ್ರಕಾರ ಏಪ್ರಿಲ್ 16ರವರೆಗೆ ಕಚೇರಿ ಸಮಯದಲ್ಲಿ ಅರ್ಜಿ ಸಲ್ಲಿಸಬಹುದು. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಹುದ್ದೆಗಳ ನೇಮಕಾತಿ ಸಂದರ್ಭದಲ್ಲಿ ಚಾಲ್ತಿಯಲ್ಲಿರುವ ಎನ್.ಹೆಚ್.ಎಮ್ ನಿಯಮಾನುಸಾರ ಹಾಗೂ ಟಿ.ಓ.ಆರ್ ಮೇರೆಗೆ ರೋಷ್ಟರ್ ಮತು ಮೇರಿಟ್ ಆಧರಿಸಿ ನೇಮಕಾತಿ ಮಾಡಲಾಗುವುದು. ಆಯ್ಕೆ ಪ್ರಕ್ರಿಯೆಯಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ. ಅಂತಿಮವಾಗಿರುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಡಿ ಭಾಗದ ಮಕ್ಕಳ ಸಮಸ್ಯೆಗಳ ಪರಿಹಾರಕ್ಕೆ ಕ್ರಮ: ಶಿವಾನಂದ

ರಾಯಚೂರು ಏಪ್ರಿಲ್ 07

ಕರ್ನಾಟಕ ಗಡಿ ಭಾಗಕ್ಕೆ ಹೊಂದಿಕೊಡಿರುವ ಕೃಷ್ಣಾ ಗ್ರಾಮದ ಕನ್ನಡ ಶಾಲೆಗೆ ರಾಯಚೂರಿನ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಏಪ್ರಿಲ್ 06ರ ಸೋಮವಾರ ದಂದು ಭೇಟಿ ನೀಡಿ, ಹಳೆ ವಿದ್ಯಾರ್ಥಿಗಳು ಹಾಗೂ ಶಾಲೆಯಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು, ಗಡಿ ಪ್ರದೇಶದಲ್ಲಿನ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರಕ್ಕೆ ಕ್ರಮ ಕೈಗೊಳ್ಳಲಾಗುವುದೆಂದರು.



ಕೃಷ್ಣಾವರೆಗೆ ಬಸ್ ವ್ಯವಸ್ಥೆ ಕಲ್ಪಿಸಲಾಗುವುದು. ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆಯಲ್ಲಿ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಸಂಬಧ ಪಟ್ಟ ಅಧಿಕಾರಿಗಳೊಂದಿಗೆ ಮಾತನಾಡಿ ಸೂಕ್ತ ಪರಿಹಾರ ಆಗುವಂತೆ ನೋಡಿಕೊಳ್ಳುತ್ತೇವೆ. ಪ್ರವೇಶಕ್ಕಾಗಿ ವಲಸೆ ಪ್ರಮಾಣ ಪತ್ರ ಹಾಗೂ ಇತರೆ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಹುಡುಕಿ ವಿದ್ಯಾರ್ಥಿಗಳಿಗೆ ಸಹಕಾರ ನೀಡಲಾಗುವುದು. ಉದ್ಯೋಗದಲ್ಲಿ ಶೇ.5ರಷ್ಟು ಮೀಸಲಾತಿ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳಿಗೆ ಪತ್ರದ ಮೂಲಕ ತಿಳಿಸುತ್ತೇವೆ ಎಂದು ಅಪರ ಜಿಲ್ಲಾಧಿಕಾರಿಗಳು ಹೇಳಿದರು.

ಗಡಿ ಶಾಲಾ ಮಕ್ಕಳು ಸುಮಾರು 51 ವರ್ಷಗಳಿಂದ 10ನೇ ತರಗತಿ ನಂತರ ಪ್ರವೇಶಕ್ಕಾಗಿ, ವಲಸೆ ಪ್ರಮಾಣ ಪತ್ರಕ್ಕಾಗಿ, ಹಾಸ್ಟೆಲ್, ಬಸ್ ಪಾಸ್, ಜಾತಿ ಪ್ರಮಾಣ ಪತ್ರ, ಶಿಷ್ಯ ವೇತನ, ಉದ್ಯೋಗಕ್ಕೆ ಸಂಬದ ಪಟ್ಟಂತೆ ಸಾಕಷ್ಟು ಸಮಸ್ಯೆಗಳು ಕಂಡು ಬರುತ್ತಿವೆ. ಕರ್ನಾಟಕ ಸರಕಾರ ಇದರ ಬಗ್ಗೆ ಕಾಳಜಿ ವಹಿಸಬೇಕು ಎಂದು ಕೃಷ್ಣಾ ಮಂಡಲದ ವಿದ್ಯಾಧಿಕಾರಿ ನಿಜಾಮುದ್ದೀನ್, ಗಡಿನಾಡು ಕನ್ನಡದ ಅಧ್ಯಕ್ಷರು ಮತ್ತು ಗೌರವ ಅಧ್ಯಕ್ಷರಾದ ಅಮರ್ ದೀಕ್ಷಿತ್, ರಾಮಲಿಂಗಪ್ಪ ಕುನ್ನಿ ಅವರು ಅಪರ ಜಿಲ್ಲಾಧಿಕಾರಿ ಗಮನಕ್ಕೆ ತಂದರು.

ಇದೇ ಸಂದರ್ಭದಲ್ಲಿ ರಾಯಚೂರು ತಹಶೀಲ್ದಾರ ಸುರೇಶ್ ವರ್ಮಾ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸೋಮಶೇಖರಪ್ಪ ಹೋಕ್ರಾಣಿ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಪ್ರವೀಣ್, ಸಾರ್ವಜನಿಕ ಶಿಕ್ಷಣ ಇಲಾಖೆಯ ರಂಗಸ್ವಾಮಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಶಿವಮಾನಪ್ಪ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ರಾಯಚೂರು ಬಿಇಒ ಈರಣ್ಣ ಕೋಸಗಿ, ಕೃಷ್ಣಾ ಮಂಡಲದ ತಹಶೀಲ್ದಾರರು ಶ್ರೀನಿವಾಸ್, ಕೃಷ್ಣಾ ಪ್ರೌಢ ಶಾಲೆಯ ಮುಖ್ಯಗುರು ಕಿಶೋರ್ ಕುಮಾರ್, ಶಾಲೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು, ಕೃಷ್ಣಾ ಗ್ರಾಮದ ಅಧ್ಯಕ್ಷರು ಎಸ್.ನಾಗೇಂದ್ರ ಹಾಗೂ ಶಾಲೆ ಹಳೆ ವಿದ್ಯಾರ್ಥಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಹಿಮೋಫಿಲಿಯಾ ಲಸಿಕೆಗೆ ಚಾಲನೆ

ಮಕ್ಕಳು ಇದರ ಸದುಪಯೋಗ ಪಡೆಯಲಿ: ಡಾ.ಸುರೇಂದ್ರ

ರಾಯಚೂರು,ಏ.07

ರಕ್ತಸ್ರಾವ ಸಂಬಧಿ ಕಾಯಿಲೆಯಿಂದ ಬಳಲುತ್ತಿರುವ ರೋಗಿಗಳಿಗೆ ಹಿಮೋಫಿಲಿಯಾ ಇಂಜೆಕ್ಷನ್ ನೀಡುತ್ತಿದ್ದು, ಕಾಯಿಲೆಗೆ ಒಳಗಾದ ಮಕ್ಕಳು ಇದರ ಸದುಪಯೋಗ ಪಡೆಯುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಸಲಹೆ ನೀಡಿದರು.



ಏಪ್ರಿಲ್ 06ರ ಸೋಮವಾರ ದಂದು ನಗರದ ರಿಮ್ಸ್ ಆಸ್ಪತ್ರೆಯ ಮಕ್ಕಳ ವಿಭಾಗದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಿಮ್ಸ್ ಆಸ್ಪತ್ರೆ ಸಹಯೋಗದಲ್ಲಿ ಕುಸುಮ ಸಂಜೀವಿನಿ ಯೋಜನೆಯಡಿ ಹಮ್ಮಿಕೊಂಡಿದ್ದ ಚುಚ್ಚು ಮದ್ದು ನೀಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

18 ಜನರಿಗೆ ಚುಚ್ಚು ಮದ್ದು ನೀಡಲಾಗಿದ್ದು, ಒಂದು ಇಂಜೆಕ್ಷನ್ ಬೆಲೆ ಸುಮಾರು 1.4 ಲಕ್ಷ ಆಗಲಿದೆ. ಇದರಿಂದ ಹಿಮೋಫಿಲಿಯಾ ರೋಗಿಗಳಿಗೆ ಅನುಕೂಲವಾಗಲಿದೆ ಎಂದರು.

ಕುಟುಬದ ಮೇಲೆ ಆರ್ಥಿಕ ದುಷ್ಪರಿಣಾಮ, ಮನಸ್ಸಿಗೆ ನೆಮ್ಮದಿಯಿಲ್ಲದಿರುವುದಕ್ಕೆ ಕಾರಣವಾಗುವ ಹಿಮೋಫಿಲಿಯಾ ಎನ್ನುವುದು ರಕ್ತವು ಸರಿಯಾಗಿ ಹೆಪ್ಪುಗಟ್ಟದ, ಹೆಚ್ಚಾಗಿ ಆನುವಂಶಿಕವಾಗಿ ಬರುವ ಅಪರೂಪದ ರಕ್ತಸ್ರಾವದ ಕಾಯಿಲೆ ಯಾಗಿದೆ. ಇದರಲ್ಲಿ ರಕ್ತ ಹೆಪ್ಪುಗಟ್ಟಲು ಅಗತ್ಯವಾದ ಪ್ರೋಟೀನ್‌ಗಳ (ಕ್ಲಾಟಿಂಗ್ ಫ್ಯಾಕ್ಟರ್ಸ್) ಕೊರತೆಯಿಂದಾಗಿ, ಗಾಯವಾದಾಗ ಅಥವಾ ಆಂತರಿಕವಾಗಿ ದೀರ್ಘ ಕಾಲ ರಕ್ತಸ್ರಾವವಾಗುವ ಹಿಮೋಫಿ

3ನೇ ಪುಟಕ್ಕೆ

ಏಪ್ರಿಲ್ 09ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

ರಾಯಚೂರು ಏಪ್ರಿಲ್ 07

ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಎಪ್ರಿಲ್ 20ರಂದು ಬಸವ ಜಯಂತಿ, ಏಪ್ರಿಲ್ 21ರಂದು ಶ್ರೀಶಂಕರಾಚಾರ್ಯ ಜಯಂತಿ, ಏಪ್ರಿಲ್ 23ರಂದು ಭಗಿರಥ ಜಯಂತಿ ಹಾಗೂ ಮೇ. 01ರಂದು ಭಗವಾನ್ ಬುದ್ಧ ಜಯಂತಿ ನಡೆಯಲಿವೆ.

ಈ ಜಯಂತಿಗಳ ಅಂಗವಾಗಿ ಏಪ್ರಿಲ್ 09ರ ಬೆಳಿಗ್ಗೆ 10ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು, ಸಂಬಧಿಸಿದ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಏಪ್ರಿಲ್ 12ರಂದು ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆ

ರಾಯಚೂರು ಏಪ್ರಿಲ್ 07

ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಪರೀಕ್ಷೆಯನ್ನು ಏಪ್ರಿಲ್ 12ರಂದು ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಏಕಕಾಲಕ್ಕೆ ಜರುಗಲಿದ್ದು, ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳು ಈ ಪರೀಕ್ಷೆಗೆ ಕಡ್ಡಾಯವಾಗಿ ಹಾಜರಾಗುವಂತೆ ಕೋರಲಾಗಿದೆ.

ಜಿಲ್ಲೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ರಾಯಚೂರು (ಬೋಳಮಾನದೊಡ್ಡಿ ರಸ್ತೆ), ಗಿಲ್ಲೇಸೂಗೂರು (ಚಂದ್ರಬಂಡಾ ರಸ್ತೆ), ಯರಮರಸ್ ಕ್ಯಾಂಪ್, ಗಿಲ್ಲೆಸುಗೂರು ಕ್ಯಾಂಪ್, ಮಾನವಿ, ಸಿಂಧನೂರು, ಚನ್ನಹಳ್ಳಿ, ಮಸ್ಕಿ, ಲಿಂಗಸೂಗೂರು, ಸಿರವಾರ, ದೇವದುರ್ಗ ಮತ್ತು ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಯರಮರಸ್ ಕ್ಯಾಂಪ್ ರಾಯಚೂರಿನಲ್ಲಿ 6ನೇ ತರಗತಿಯಿಂದ 10ನೇ ತರಗತಿಯ ವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರೆ ವರ್ಗದವರಿಗೆ ಮೀಸಲಿರಿಸಿ, ಪ್ರಸ್ತುತ ಕರ್ನಾಟಕದ ಸರ್ಕಾರದ/ಅಂಗೀಕೃತ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪ.ಜಾತಿ/ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ಆನ್‌ಲೈನ್ ಸೇವಾಸಿಂಧು ವಿಳಾಸ: ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತು. ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳಿಗೆ ದಿನಾಂಕ:12.04.2026 ಭಾನುವಾರದಂದು ಪ್ರವೇಶ ಪರೀಕ್ಷೆಯು ಜಿಲ್ಲೆಯ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಏಕಕಾಲಕ್ಕೆ

3ನೇ ಪುಟಕ್ಕೆ

ದೀಪಾ ಗೊಡೆಪಾಡ್ ಅವರಿಂದ ಅಧಿಕಾರ ಸ್ವೀಕಾರ

ರಾಯಚೂರು,ಏ. 07

ರಾಯಚೂರು ಜಿಲ್ಲಾ ಗೃಹ ರಕ್ಷಕ ದಳದ ಜಿಲ್ಲಾ ಸಮಾದೇಷ್ಟರ ಹುದ್ದೆಯ ಪ್ರಭಾರ ಅಧಿಕಾರವನ್ನು ದೀಪಾ ಗೊಡೆಪಾಡ್ ಎಸ್.ಎ ಅವರು ಏಪ್ರಿಲ್ 06ರ ಮಂಗಳವಾರ ದಂದು ಅಧಿಕಾರ ಸ್ವೀಕರಿಸಿದರು.

ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಜಿ.ಹರೀಶ್ ಅವರು ಅಧಿಕಾರ ಹಸ್ತಾಂತರಿಸಿದರು ಎಂದು ಗೃಹ ರಕ್ಷಕ ದಳದ ಕಚೇರಿಯ ಪ್ರಕಟಣೆ ತಿಳಿಸಿದೆ.

ಏಪ್ರಿಲ್ 8ರಂದು ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ರಾಯಚೂರು ಏಪ್ರಿಲ್ 07

ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು 2026ರ ಏಪ್ರಿಲ್ 8ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅವರು ಏಪ್ರಿಲ್ 7ರ ಸಂಜೆ 5ಗಂಟೆಗೆ ದಾವಣಗೆರೆಯಿಂದ ನಿರ್ಗಮಿಸಿ, ರಾತ್ರಿ 11ಗಂಟೆಗೆ ರಾಯಚೂರು ನಗರಕ್ಕೆ ಆಗಮಿಸಲಿದ್ದಾರೆ.

ಏಪ್ರಿಲ್ 8ರ ಬೆಳಿಗ್ಗೆ 10.30ಕ್ಕೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಗಳ ಕಚೇರಿಯ ಸಭಾಂಗಣದಲ್ಲಿ ರಾಯಚೂರು ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆಗಳು ಮತ್ತು ಜಾನುವಾರುಗಳಿಗೆ ಮೇವಿನ ಲಭ್ಯತೆಯ ಕುರಿತು ಜಿಲ್ಲಾಡಳಿತದೊಂದಿಗಿನ ಸಭೆಯಲ್ಲಿ ಭಾಗವಹಿಸುವರು.

ಮಧ್ಯಾಹ್ನ 12.30ಕ್ಕೆ ಎಪಿಎಮ್‌ಸಿ ಕಲ್ಯಾಣ ಮಂಟಪದಲ್ಲಿ ಮದುವೆ ಸಮಾರಂಭದಲ್ಲಿ ಭಾಗವಹಿಸುವರು.

ಮಧ್ಯಾಹ್ನ 2.30ಕ್ಕೆ ರಾಯಚೂರಿನಿಂದ ರಸ್ತೆ ಮಾರ್ಗವಾಗಿ ಕಲಬುರಗಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಯಿ, ಶಿಶು ಮರಣ ತಡೆಗೆ ಒತ್ತು; ಶಸ್ತಚಿಕಿತ್ಸೆಯ ಹೆರಿಗೆಗಳನ್ನು ಶೇ.25ಕ್ಕೆ ಇಳಿಸಲು ನಿರ್ಧಾರ- ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು

ಬಳ್ಳಾರಿ,ಏ.07-

ಜಿಲ್ಲೆಯಲ್ಲಿ ತಾಯಿ ಮರಣ, ಶಿಶು ಮರಣ ಹಾಗೂ ನಿರ್ಜೀವ ಜನನ ಪ್ರಮಾಣವನ್ನು ಗಣನೀಯವಾಗಿ ಕಡಿಮೆ ಮಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಜಾಗರೂಕರಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಸೋಮವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಭಾಂಗಣದಲ್ಲಿ ಆಯೋಜಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಶೇಷವಾಗಿ ಪ್ರಸ್ತುತ ನಡೆಯುತ್ತಿರುವ ಶಸ್ತಚಿಕಿತ್ಸಾ ಹೆರಿಗೆಗಳ ಪ್ರಮಾಣವನ್ನು ಶೇ.25ಕ್ಕೆ ಇಳಿಸುವ ಕುರಿತು ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿದ ಡಿಹೆಚ್‌ಓ ಅವರು, ನಿರ್ಜೀವ ಜನನಗಳನ್ನು ತಡೆಯುವ ಕುರಿತು



ತಜ್ಞ ವೈದ್ಯರ ಅಭಿಪ್ರಾಯಗಳನ್ನು ಕ್ರೋಡೀಕರಿಸಿ ವರದಿಯನ್ನು ಸಿದ್ಧಪಡಿಸಬೇಕು ಎಂದು ತಿಳಿಸಿದರು.

ಪ್ರಾಣಾಪಾಯದಿಂದ ಪಾರಾದ 78 ತಾಯಂದಿರು:

2025-26ನೇ ಸಾಲಿನಲ್ಲಿ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದಿದ 54 ತಾಯಂದಿರನ್ನು ಹಾಗೂ ಜಿಲ್ಲಾ ಆಸ್ಪತ್ರೆಯಿಂದ 24 ತಾಯಂದಿರನ್ನು ಪ್ರಾಣಾಪಾಯದಿಂದ ಪಾರು ಮಾಡಲಾಗಿದೆ. ಒಟ್ಟಾರೆ 78 ತಾಯಂದಿರ ಮರಣವನ್ನು ತಡೆಯುವಲ್ಲಿ ಯಶಸ್ವಿಯಾಗಿರುವ ಆಸ್ಪತ್ರೆಗಳ ನಿರ್ದೇಶಕರು, ವೈದ್ಯಕೀಯ ಅಧೀಕ್ಷಕರು, ತಜ್ಞ ವೈದ್ಯರು ಹಾಗೂ ಜಿಲ್ಲಾ ಶಸ್ತಚಿಕಿತ್ಸಕರ ಕಾರ್ಯವೈಖರಿಯನ್ನು ಡಾ.ಯಲ್ಲಾ ರಮೇಶ್ ಬಾಬು ಅವರು ಶ್ಲಾಘಿಸಿದರು.

★2026-27ನೇ ಸಾಲಿನಲ್ಲಿ ಮತ್ತಷ್ಟು ಸುಧಾರಣೆ:★

ತಾಯಿ ಮರಣ ದರವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಕೈಗೊಂಡ ಕ್ರಮಗಳು ಸಕಾರಾತ್ಮಕ ಫಲಿತಾಂಶ ನೀಡುತ್ತಿವೆ. 2026-27ನೇ ಸಾಲಿನಲ್ಲಿ ತಾಯಿ ಮರಣ ದರವನ್ನು ಶೂನ್ಯದತ್ತ ಕೊಂಡೊಯ್ಯುವ ಗುರಿಯನ್ನು ಆರೋಗ್ಯ ಇಲಾಖೆ ಹಾಕಿಕೊಂಡಿದೆ. ಇದಕ್ಕಾಗಿ ಮತ್ತಷ್ಟು ಜಾಗರೂಕತೆಯಿಂದ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳು ಮತ್ತು ವೈದ್ಯರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಡಾ.ಹನುಮಂತಪ್ಪ, ಬಿಎಂಸಿಆರ್‌ಸಿ ಯ ಎಂಎಆರ್ ನ ನೋಡಲ್ ಅಧಿಕಾರಿ ಡಾ.ಹೆಚ್.ಇ. ರಾಮರಾಜು, ಜಿಲ್ಲಾ ಆಸ್ಪತ್ರೆಯ ಮಕ್ಕಳ ತಜ್ಞರ ವಿಭಾಗದ ಮುಖ್ಯಸ್ಥ ಡಾ.ವಿಶ್ವನಾಥ್ ಬಿ., ಬಿಎಂಸಿಆರ್‌ಸಿ ಎಸ್‌ಎನ್‌ಸಿಯು ಮುಖ್ಯಸ್ಥ ಡಾ.ರಿಜೇಶ್, ಪ್ರಸೂತಿ ತಜ್ಞ ಡಾ.ಪ್ರಶಾಂತ್, ಮಕ್ಕಳ ತಜ್ಞ ಡಾ.ಎಮ್. ಬಾಲವೆಂಕಟೇಶ್ವರರಾವ್, ವಿವಿಧ ತಾಲ್ಲೂಕುಗಳ ಆರೋಗ್ಯ ಅಧಿಕಾರಿಗಳಾದ ಡಾ.ಆರ್.ಅಬ್ದುಲ್ಲಾ, ಡಾ.ಸುನೀಲ್, ಡಾ.ಅರುಣ್, ಡಾ.ಮಂಜುನಾಥ್ ಜವಳಿ, ಡಾ.ಭರತ್, ಡಾ.ಸುರೇಶ್ ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು, ಎನ್.ಕ್ಯೂ.ಎ.ಎಸ್ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.



15 ಕೋಟಿ ರೂ. ವೆಚ್ಚದಲ್ಲಿ ಚೆಕ್ ಡ್ಯಾಂ ನಿರ್ಮಾಣ: ಶಾಸಕ ಜೆ.ಎನ್.ಗಣೇಶ


ಕಂಪ್ಲಿ ,ಏ.07-

ಉಪ್ಪಾರಹಳ್ಳಿ, ಮೆಟ್ರಿ, ಚಿನ್ನಾಪುರ, ಜವುಕು ಗ್ರಾಮಗಳಿಗೆ ಅನುಕೂಲವಾಗಲು ಸುಮಾರು 15 ಕೋಟಿ ವೆಚ್ಚದಲ್ಲಿ ಚೆಕ್ ಡ್ಯಾಂ ನಿರ್ಮಿಸಲು ಯೋಜನೆ ರೂಪಿಸುತ್ತಿದ್ದು, ಇದರಿಂದ ಈ ಭಾಗದ ರೈತರಿಗೆ ನೀರಿನ ಅನುಕೂಲದ ಜೊತೆಗೆ ಅಂತರ್ಜಲ ವೃದ್ಧಿ, ಜನ ಜಾನುವಾರುಗಳಿಗೆ ಅನುಕೂಲವಾಗಲಿದೆ ಎಂದು ಶಾಸಕ ಜೆ.ಎನ್.ಗಣೇಶ ಹೇಳಿದ್ದಾರೆ.

ತಾಲೂಕಿನ ಮೆಟ್ರಿ ಗ್ರಾಮದಲ್ಲಿ 2025-26ನೇ ಸಾಲಿನ 4059 ಸಿಎಂಐಡಿಕ್ಯೂ ಯೋಜನೆಯ ಸುಮಾರು 3 ಕೋಟಿ ವೆಚ್ಚದಲ್ಲಿ ನಿರ್ಮಿಸಲಿರುವ ಮೆಟ್ರಿ-ಜವುಕು ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶನಿವಾರ ಶಂಕುಸ್ಥಾಪನೆ ನೆರವೇರಿಸಿದ ನಂತರ ಮಾತನಾಡಿ ನಾನಾ ಅಭಿವೃದ್ಧಿ ಕಾರ್ಯಗಳೊಂದಿಗೆ ಜನತೆಗೆ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. ಮುಂದಿನ ದಿನದಲ್ಲಿ ಇನ್ನಷ್ಟು ಅನುದಾನದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದರು.

ಈ ಸಂದರ್ಭದಲ್ಲಿ ಕಂಪ್ಲಿ ಬ್ಲಾಕ್ ಅಧ್ಯಕ್ಷ ಕೆ.ಶ್ರೀನಿವಾಸರಾವ್, ಹೊನ್ನಳ್ಳಿ ಗಂಗಾಧರ, ಹೊಸಕೋಟೆ ಜಗದೀಶ, ಮೆಟ್ರಿ ಶಿವಪುತ್ರಪ್ಪ, ಮೆಟ್ರಿ ಗಿರೀಶ ನೆಣಕಿ, ಉಪ್ಪಾರಹಳ್ಳಿ ಹನುಮನಗೌಡ ಸೇರಿದಂತೆ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

ಎ.20ರಂದು ಬಸವ ಜಯಂತಿ ವಿಜೃಂಭಣೆಯಿಂದ ಆಚರಣೆ : ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ



ವಿಜಯನಗರ,,ಏ.07-

ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿಯನ್ನು ಏಪ್ರಿಲ್ 20ರಂದು ವಿಜೃಂಭಣೆಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದ್ದಾರೆ.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಬಸವ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಶ್ವಗುರು ಬಸವಣ್ಣನವರ ಜಯಂತಿಯನ್ನು ಸಂಭ್ರಮದಿಂದ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಜಯಂತಿ ದಿನ ಬಸವಣ್ಣನವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು. ನಂತರ ಕೊಟ್ಟೂರ ಮಠದಲ್ಲಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ. ಸರ್ಕಾರದ ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುತ್ತದೆ. ನಗರದ ಪ್ರಮುಖ ವೃತ್ತಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗುವುದು. ಬಸವಣ್ಣನವರ ತತ್ವ ಮತ್ತು ದಾರ್ಶನಿಕತೆ ಕುರಿತು ಯುವ ಪೀಳಿಗೆಗೆ ಅರಿವು ಮೂಡಿಸಲು ಉಪನ್ಯಾಸ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ ಎಂದು ವಿವರಿಸಿದರು.

ಭವ್ಯ ಮೆರವಣಿಗೆ: ಜಯಂತಿ ಅಂಗವಾಗಿ ಬೃಹತ್ ಮೆರವಣಿಗೆ ಕೂಡ ಆಯೋಜಿಸಲಾಗಿದ್ದು, ಸಣ್ಣಕ್ಕಿ ವೀರಭದ್ರೇಶ್ವರ ದೇವಸ್ಥಾನದಿಂದ ಪ್ರಾರಂಭವಾಗಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕೊಟ್ಟೂರು ಮಠದ ಬಳಿ ಮುಕ್ತಾಯಗೊಳ್ಳಲಿದೆ. ಮೆರವಣಿಗೆಯನ್ನು ಶಾಂತಿಯುತ ಹಾಗೂ ಸೌಹಾರ್ದಯುತವಾಗಿ ನಡೆಸಲು ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಅಪರ ಜಿಲ್ಲಾಧಿಕಾರಿ ಇ. ಬಾಲಕೃಷ್ಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕಾಳಗಿ ಮಕ್ಕಳಿಗೆ ಮಾತೃಭಾಷೆಯಲ್ಲಿ ಶಿಕ್ಷಣ ನೀಡಿ



ಕಾಳಗಿ,ಏ.07-

ಅಕ್ಷರಗಳ ಹಂಗಿಲ್ಲದೆ ತಾಯಿ ಮಗುವಿಗೆ ಮೌಖಿಕವಾಗಿ ಕಲಿಸುವ ಭಾಷೆಯೇ ಮಾತೃಭಾಷೆಯಾಗಿದ್ದು, ಇದರ ಮೂಲಕ ಮಗು ತನ್ನ ಭಾವನೆಗಳನ್ನು ಸಂಪೂರ್ಣವಾಗಿ ವ್ಯಕ್ತಪಡಿಸಲು ಕಲಿಯುತ್ತದೆ. ಆದ್ದರಿಂದ ಪ್ರಾಥಮಿಕ ಹಂತದವರೆಗೆ ಮಾತೃಭಾಷೆಯಲ್ಲೇ ಶಿಕ್ಷಣ ನೀಡಬೇಕು ಎಂದು ರಾಜೇಶ್ವರ ಶಿವಾಚಾರ್ಯರು ಪಾಲಕರಿಗೆ ಸಲಹೆ ನೀಡಿದರು.

ತಾಲೂಕಿನ ಭೆಡಸೂರ ಗ್ರಾಮದಲ್ಲಿ ಹನುಮಾನ್ ದೇವಸ್ಥಾನದ ಗೋಪುರ ಕಳಸಾರೋಹಣ, ಪರ್ವತ ಮಲ್ಲಿಕಾರ್ಜುನ ದೇವಸ್ಥಾನದ ರಥೋತ್ಸವ ಹಾಗೂ ಧರ್ಮಸಭೆ ಕಾರ್ಯಕ್ರಮ ಉದ್ಘಾಟಿಸಿ ಆಶೀರ್ವಚನ ನೀಡಿದ ಅವರು, ಆಂಗ್ಲ ಮಾಧ್ಯಮ ವ್ಯಾಮೋಹಕ್ಕೆ ಮಾರು ಹೋಗದೆ ಮಾತೃಭಾಷೆಯಲ್ಲಿ ಶಿಕ್ಷಣ ನೀಡುವುದರಿಂದ ಮಕ್ಕಳಲ್ಲಿ ಉತ್ತಮ ಸಂಸ್ಕಾರ ಹಾಗೂ ಸಂಸ್ಕೃತಿ ಬೆಳೆಯುತ್ತದೆ ಎಂದರು.

ಇಂದಿನ ದಿನಗಳಲ್ಲಿ ಹಣ ಇದ್ದರೂ ಕುಟುಂಬಗಳಲ್ಲಿ ಏಕತೆ ಕಡಿಮೆಯಾಗುತ್ತಿದೆ. ಹಣದಿಂದ ಮಾತ್ರ ಸಂತೋಷ ಸಿಗುವುದಿಲ್ಲ, ಕುಟುಂಬದ ಒಗ್ಗಟ್ಟು, ಪರಸ್ಪರ ಪ್ರೀತಿ ಮತ್ತು ಗೌರವವೇ ನಿಜವಾದ ನೆಮ್ಮದಿಗೆ ಕಾರಣ ಎಂದು ಹೇಳಿದರು.

ಕೃಷಿ ಕಾಯಕದಲ್ಲಿ ತೊಡಗಿ ಸ್ವಾವಲಂಬಿಯಾಗಿ ಬದುಕಬೇಕು. ಮನೆಗಳಲ್ಲಿ ಹಸುಗಳನ್ನು ಸಾಕುವುದರಿಂದ ಮಕ್ಕಳಿಗೆ ಶುದ್ಧ ಹಾಲು, ಮಜ್ಜಿಗೆ, ಅಂಬಲಿ ಸೇರಿದಂತೆ ಆರೋಗ್ಯಕರ ಆಹಾರ ದೊರೆಯುತ್ತದೆ. ಇದರಿಂದ ರೋಗರಹಿತ ಕುಟುಂಬ ನಿರ್ಮಾಣ ಸಾಧ್ಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಸಕ ಡಾ. ಅವಿನಾಶ್ ಜಾಧವ್ ಮಾತನಾಡಿ, ''ನನ್ನ ಕುಟುಂಬಕ್ಕೆ ರಾಜಕೀಯ ಜನ್ಮ ನೀಡಿದ ಊರು ಭೆಡಸೂರ. ದೇವಸ್ಥಾನ ಜೀರ್ಣೋದ್ಧಾರಕ್ಕೆ ಆಶೀರ್ವಾದ ನೀಡಿದ ಕಾರಣದಿಂದಲೇ ಅನುದಾನ ನೀಡಲು ಸಾಧ್ಯವಾಯಿತು. ನಿಮ್ಮ ಋಣವನ್ನು ಎಂದಿಗೂ ಮರೆಯುವುದಿಲ್ಲ'' ಎಂದರು.

ಈ ಮೊದಲು ಹನುಮಾನ್ ದೇವಸ್ಥಾನದ ಗೋಪುರ ಕಳಸಾರೋಹಣದ ನಿಮಿತ್ತ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಮಲ್ಲಿಕಾರ್ಜುನ ಮಠದಿಂದ ಕುಂಭಕಳಸದ ಮೆರವಣಿಗೆ ದೇವಸ್ಥಾನಕ್ಕೆ ಆಗಮಿಸಿ, ಪೂಜ್ಯ ರಾಜೇಶ್ವರ ಶಿವಾಚಾರ್ಯರು ಹಾಗೂ ಪೂಜ್ಯ ಚಂದ್ರಗುಂಡ ಶಿವಾಚಾರ್ಯರ ನೇತೃತ್ವದಲ್ಲಿ ಕಳಸಾರೋಹಣ ನೆರವೇರಿಸಲಾಯಿತು.

ಸಾಯಂಕಾಲ ಪರ್ವತ ಮಲ್ಲಿಕಾರ್ಜುನ ಜಾತ್ರಾ ಮಹೋತ್ಸವದ ಅಂಗವಾಗಿ ಪಲ್ಲಕ್ಕಿ ಉತ್ಸವ ಮೆರವಣಿಗೆ ನಡೆಯಿತು. ನಂತರ ರಥೋತ್ಸವಕ್ಕೆ ಚಾಲನೆ ನೀಡಲಾಗಿದ್ದು, ಸಾವಿರಾರು ಭಕ್ತರು ತೇರಿಗೆ ಖಾರಿಕನಾರು, ಬಾಳೆಹಣ್ಣು, ನಾಣ್ಯ ಎಸೆದು ಭಕ್ತಿ ಸಮರ್ಪಿಸಿದರು. ಧರ್ಮಸಭೆಯಲ್ಲಿ ನಾಗೂರಿನ ಅಲ್ಲಮಪ್ರಭು ಮಹಾಸ್ವಾಮಿಗಳು, ಚಂದನಕೇರಾದ ಅಭಿನವ ರಾಚೋಟೇಶ್ವರ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು. ಮುಖಂಡ ಬಸವರಾಜ ಶಿವಗೋಳ, ಜಿಪಂ.ಮಾಜಿ ಸದಸ್ಯರಾದ ಬಸವರಾಜ ಬೆಣ್ಣೂರಕರ್, ರಾಜೇಶ ಗುತ್ತೇದಾರ ಮಾತನಾಡಿದರು.

ಸೋನಾಲಗಿರಿ ಪರ್ವತಲಿಂಗ ಪರಮೇಶ್ವರ ಮಹಾರಾಜರು, ಮುಖಂಡ ದಯಾಸಾಗರ ಪಾಟೀಲ, ಬಸವರಾಜ ಪಾಟೀಲ ಹೇರೂರ, ಮಲ್ಲಿಕಾರ್ಜುನ ಪಾಟೀಲ ಹುಳಗೇರಾ, ಮಲ್ಲಿಕಾರ್ಜುನ ಗಾಜರೆ, ಚಂದ್ರಪ್ಪ ಮಾಸ್ತರ, ಶಿವರಾಜ ಪಾಟೀಲ ಗೊಣಗಿ, ರವೀಂದ್ರ ಪಾಟೀಲ, ಶರಣು ಪಾಟೀಲ, ಚಂದ್ರಶೇಖರ ಪಾಟೀಲ , ಹಣಮಂತರಾವ ಪಾಟೀಲ, ಸೂರ್ಯಕಾಂತ ತಳವಾರ, ಶಿವಲಿಂಗಪ್ಪ ಮೊರಪತ್ತಿ, ಮಲ್ಲಿಕಾರ್ಜುನ ಸಿದ್ರಾಮಗೋಳ, ಪರಮೇಶ್ವರ ಸದಲಾಪೂರ, ಸಿದ್ದು ಪಾಟೀಲ, ರಮೇಶ ಹರಸೂರ, ಸಿದ್ದಣ್ಣ ಸದಲಾಪೂರ, ಸಂತೋಷ ಪಾಟೀಲ ಮಂಗಲಗಿ, ಶರಣು ಚಂದಾ, ಜಗನ್ನಾಥ ತೇಲಿ, ರಮೇಶ ಕಿಟ್ಟದ, ಪುರುಷೋತ್ತಮ ಗುತ್ತೇದಾರ, ಶಿವರಾಜ್ ಪಾಟೀಲ ಅರಣಕಲ್, ರಾಮರೆಡ್ಡಿ ಪಾಟೀಲ, ಗಂಗಾಧರ ರೆವಗ್ಗಿ ಸೇರಿದಂತೆ ಅನೇಕರಿದ್ದರು.

ಧರ್ಮಗಳಿಗಿಂತ ಮನುಷ್ಯತ್ವವೇ ಶ್ರೇಷ್ಠ : ಗುರುದ್ವಾರದ ದೀಪ್ ಸಿಂಗ್ ಗ್ರಂಥಿ



ಕಲಬುರಗಿ,ಏ.07-

''ಕಷ್ಟದ ಸಮಯದಲ್ಲಿ ಯಾರೂ ಧರ್ಮ ನೋಡೋದಿಲ್ಲ, ಮನುಷ್ಯತ್ವವೇ ಮೊದಲಿಗೆ ಬರುತ್ತದೆ. ಎಲ್ಲಾ ಧರ್ಮಗಳಲ್ಲಿ ಒಳ್ಳೆಯ ಕೆಲಸ ಮಾಡುವುದೇ ಶ್ರೇಷ್ಠವಾದುದು'' ಎಂದು ಗುರುದ್ವಾರದ ದೀಪ್ ಸಿಂಗ್ ಗ್ರಂಥಿ ಹೇಳಿದರು.

ನಗರದ ಕನ್ನಡ ಭವನದಲ್ಲಿ ರವಿವಾರ ಸಂಜೆ ಕಲಬುರಗಿ ಅಭಿವೃದ್ಧಿಪರ ಸಮಿತಿ ವತಿಯಿಂದ ಆಯೋಜಿಸಿದ್ದ ಈಸ್ಟರ್ ಹಾಗೂ ಈದ್ ಮಿಲಾಪ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಹಿಂದೂ, ಮುಸ್ಲಿಂ, ಸಿಖ್ ಹಾಗೂ ಕ್ರಿಶ್ಚಿಯನ್ ಧರ್ಮಗಳಲ್ಲಿ ಪ್ರಾರ್ಥನೆಯ ವಿಧಾನಗಳು ಬೇರೆಬೇರೆ ಇದ್ದರೂ, ಎಲ್ಲರ ಆಶಯ ಒಂದೇ ಆಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಇತ್ತೀಚಿನ ದಿನಗಳಲ್ಲಿ ಯುವಜನಾಂಗವು ಪರಂಪರೆ ಮತ್ತು ಮೌಲ್ಯಗಳಿಂದ ದೂರವಾಗುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ ಅವರು, ಕುಟುಂಬ ಮತ್ತು ಸಮಾಜದೊಂದಿಗೆ ಯುವಕರನ್ನು ಮರುಸಂಪರ್ಕಗೊಳಿಸುವ ಅಗತ್ಯವಿದೆ. ಕುಟುಂಬ ಆರೋಗ್ಯವಾಗಿದ್ದರೆ ದೇಶ ಅಭಿವೃದ್ಧಿಯಾಗುತ್ತದೆ ಎಂದು ಹೇಳಿದರು.

''ಒಂದೇ ವೇದಿಕೆಯಲ್ಲಿ ಎಲ್ಲಾ ಧರ್ಮಗಳ ಜನ ಸೇರಿರುವುದು ದೇಶದ ಏಕತೆಗಾಗಿ ಉತ್ತಮ ಸೂಚನೆ. ದೇಹದಲ್ಲಿ ಎಲ್ಲರಿಗೂ ರಕ್ತ, ಮೂಳೆ, ಮಾಂಸ ಒಂದೇ ಇದ್ದರೂ, ವಿಚಾರದಲ್ಲಿ ಭಿನ್ನತೆ ಇದೆ. ಈ ಭಿನ್ನತೆಯನ್ನು ಅರ್ಥಮಾಡಿಕೊಳ್ಳಬೇಕು'' ಎಂದು ಹೇಳಿದರು.

ಸಮಾಜದಲ್ಲಿ ಧರ್ಮ ಆಧಾರಿತ ವಿಭಜನೆ ಹೆಚ್ಚುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ಪರಸ್ಪರ ಧರ್ಮಗಳ ಬಗ್ಗೆ ಅರಿವು ಬೆಳೆಸಿಕೊಳ್ಳುವುದು ಅಗತ್ಯ ಎಂದು ತಿಳಿಸಿದರು. ''ದೇವರಿಗೆ ಧನ್ಯವಾದ ಹೇಳುವುದು ಮತ್ತು ಒಳ್ಳೆಯ ಕೆಲಸ ಮಾಡುವುದು ಧರ್ಮಾಚರಣೆಯ ಅತ್ಯುತ್ತಮ ಮಾರ್ಗ'' ಎಂದು ಹೇಳಿದರು.

ಸೇಂಟ್ ಮೇರಿ ಚರ್ಚ್‌ನ ಫಾದರ್ ಸ್ಟ್ಯಾನಿ ಲೋಬೊ ಮಾತನಾಡಿ, ಪ್ರೀತಿ ಮತ್ತು ಸಂತೋಷದಿಂದ ಬದುಕುವುದೇ ನಿಜವಾದ ಧರ್ಮ ಎಂದು ಹೇಳಿದರು. ರಮಝಾನ್ ಸಂದರ್ಭದಲ್ಲಿ ಉಪವಾಸದ ಮೂಲಕ ಆತ್ಮಶುದ್ಧಿ ಸಾಧಿಸಲಾಗುತ್ತದೆ, ಇದು ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತದೆ ಎಂದರು.

''ಯಾರಿಗೂ ತೊಂದರೆ ಕೊಡದೆ ಸಹಕಾರ ಮನೋಭಾವದಿಂದ ಬದುಕಿದರೆ ಸಮಾಜ ಸುಂದರವಾಗುತ್ತದೆ. ದುಡಿಯುವವರಿಗೆ ನೆರವಾಗುವುದು ನಮ್ಮ ಕರ್ತವ್ಯ'' ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಸೈಯದ್ ಶಾ ಯಾದುಲ್ಲಾ ಹುಸೈನಿ ನಿಜಾಮ್ ಬಾಬಾ, ಶ್ರೀನಿವಾಸ ಸರಡಗಿ ರೇವಣಸಿದ್ಧ ಶಿವಾಚಾರ್ಯ, ಸುಮಂತ್ ಸರಡಗಿ, ಸ್ಯಾಮ್ಯುಯೆಲ್ ಭಾರೇರರ್ ಬಹಮನಿ ಫೌಂಡೇಶನ್‌ನ ಕಾಜಿ ರಿಜ್ವಾನ್ ಸಿದ್ದಿಕಿ, ಸಾಹಿತಿ ರೌಫ್ ಖಾದ್ರಿ, ಕೆಕೆಸಿಸಿಐ ಅಧ್ಯಕ್ಷ ಶರಣಬಸಪ್ಪ ಪಪ್ಪಾ,

ವೈಜನಾಥ್ ಝಳಕಿ ಹಾಗೂ ಸಯ್ಯದ್ ನಜೀರುದ್ದೀನ್ ಮುತ್ತವಲ್ಲಿ ಸೇರಿದಂತೆ ಹಲವರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ವಿವಿಧ ಧರ್ಮಗಳ ಮುಖಂಡರು ಭಾಗವಹಿಸಿ ಸೌಹಾರ್ದತೆ ಹಾಗೂ ಮಾನವೀಯ ಮೌಲ್ಯಗಳ ಮಹತ್ವವನ್ನು ಒತ್ತಿಹೇಳಿದರು.

ಕಲಬುರಗಿ ಅಭಿವೃದ್ಧಿಪರ ಸಮಿತಿಯ ಅಧ್ಯಕ್ಷ ಲೂಯಿಸ್ ಕೋರಿ ಸ್ವಾಗತಿಸಿದರು. ಮುಬೀನ್ ಅಹ್ಮದ್ ಕಾರ್ಯಕ್ರಮವನ್ನು ನಿರೂಪಿಸಿದರು.

2 ಸಾವಿರ ರೂ. ಲಂಚ ಪಡೆಯುವ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ಬಿಲ್ ಕಲೆಕ್ಟರ್



ಕಲಬುರಗಿ,ಏ.07-

ವ್ಯಕ್ತಿಯೊಬ್ಬರ ತಂದೆಯ ಹೆಸರಿನಲ್ಲಿರುವ ಜಾಗವನ್ನು ತಾಯಿಯ ಹೆಸರಿಗೆ ಮ್ಯುಟೇಶನ್ ಮಾಡಿಕೊಡುವ ಸಲುವಾಗಿ ಲಂಚ ಸ್ವೀಕರಿಸುತ್ತಿದ್ದ ಗ್ರಾಮ ಪಂಚಾಯತ್ ಬಿಲ್ ಕಲೆಕ್ಟರ್ ಒಬ್ಬರು ಲೋಕಾಯುಕ್ತ ಅಧಿಕಾರಿಗಳ ಬಲೆಗೆ ಬಿದ್ದಿರುವ ಘಟನೆ ಸೋಮವಾರ ನಡೆದಿದೆ.

ಕಲಬುರಗಿ ತಾಲೂಕಿನ ಕುಮಸಿ ಗ್ರಾಮ ಪಂಚಾಯತ್‌ನ ಬಿಲ್ ಕಲೆಕ್ಟರ್ ಮಲ್ಲಿಕಾರ್ಜುನ ಬಂಧಿತ ವ್ಯಕ್ತಿಯಾಗಿದ್ದಾರೆ. ಗಣಜಲಖೇಡ ಗ್ರಾಮದ ಅನೀಲಕುಮಾರ್ ರಾಠೋಡ ಅವರು ತಮ್ಮ ತಂದೆಯ ಹೆಸರಿನಲ್ಲಿರುವ ಜಾಗವನ್ನು ತಾಯಿಯ ಹೆಸರಿಗೆ ಮ್ಯೂಟೇಶನ್ ಮಾಡಿಕೊಡುವ ಸಲುವಾಗಿ ಮಲ್ಲಿಕಾರ್ಜುನ ಅವರು 4,000 ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಈ ಮೊತ್ತದಲ್ಲಿ ಈಗಾಗಲೇ ಫೋನ್ ಪೇ ಮೂಲಕ 2,000 ರೂ. ಹಣವನ್ನು ಸ್ವೀಕರಿಸಿದ್ದು, ಉಳಿದ 2,000 ರೂ. ಹಣವನ್ನು ಸ್ವೀಕರಿಸುತ್ತಿದ್ದ ವೇಳೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಅವರನ್ನು ಬಂಧಿಸಿದ್ದಾರೆ ಎಂದು ತಿಳಿದು ಬಂದಿದೆ.

ಲೋಕಾಯುಕ್ತ ಎಸ್‌ಪಿ ಸಿದ್ಧರಾಜು ಸಿ. ಅವರ ಮಾರ್ಗದರ್ಶನದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ ಲೋಕಾಯುಕ್ತ ಪೊಲೀಸ್ ಇನ್ಸ್‌ಪೆಕ್ಟರ್2 ರಾಜಶೇಖರ ಬಡದೆಸಾರ ಅವರ ನೇತೃತ್ವದಲ್ಲಿ ತನಿಖೆ ಕೈಗೊಳ್ಳಲಾಗಿದ್ದು, ಆರೋಪದ ಸತ್ಯಾಸತ್ಯತೆ ದೃಢಪಟ್ಟ ಹಿನ್ನೆಲೆಯಲ್ಲಿ ಮಲ್ಲಿಕಾರ್ಜುನರನ್ನು ಬಂಧಿಸಲಾಗಿದೆ.



ಡಾ.ಬಿ.ಆರ್.ಅಂಬೇಡ್ಕರ್ ಬದುಕು ಮತ್ತು ಬರಹ ಕುರಿತು ರಾಜ್ಯ ಮಟ್ಟದ ಮುಕ್ತ ರಸಪ್ರಶ್ನೆ ಸ್ಪರ್ಧೆ

ಬಳ್ಳಾರಿ,ಏ.07-

ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕು ಆಡಳಿತ,ಪೊಲೀಸ್ ಇಲಾಖೆ,ಶಿಕ್ಷಣ ಇಲಾಖೆಗಳು ಸ್ಥಳೀಯ ದಲಿತ,ಕನ್ನಡ ಪರ ಹಾಗೂ ಇತರೆ ಸಂಘಟನೆಗಳ ಸಹಯೋಗದಲ್ಲಿ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ನಿಮಿತ್ಯ ಡಾ.ಬಿ.ಆರ್.ಅಂಬೇಡ್ಕರ್ ಅವರ ಬದುಕು ಮತ್ತು ಬರಹ ಕುರಿತು ರಾಜ್ಯ ಮಟ್ಟದ ಮುಕ್ತ ರಸಪ್ರಶ್ನೆ ಸ್ಪರ್ಧೆ ಆಯೋಜಿಸಿದೆ.ಸ್ಪರ್ಧೆಯು ಏಪ್ರಿಲ್ 12 ರಂದು ಬೆಳಿಗ್ಗೆ 9 ಗಂಟೆಗೆ ಕುಷ್ಟಗಿ ಪಟ್ಟಣದ ಕ್ರೈಸ್ಟ್ ದಿ ಕಿಂಗ್ ಶಾಲೆಯಲ್ಲಿ ನಡೆಯಲಿದೆ.

ಈ ರಸಪ್ರಶ್ನೆ ಸ್ಪರ್ಧೆಯಲ್ಲಿ ಯಾವುದೇ ವಯೋಮಿತಿ , ವಿದ್ಯಾರ್ಹತೆಯ ನಿರ್ಬಂಧ ಇರುವುದಿಲ್ಲ, ಎಲ್ಲ ಆಸಕ್ತರಿಗೂ ಮುಕ್ತ ಅವಕಾಶವಿರುತ್ತದೆ. ರಾಜ್ಯದ ಯಾವುದೇ ಜಿಲ್ಲೆಗಳ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡಿನ ನಕಲು ಪ್ರತಿ ಒದಗಿಸಿ ಭಾಗವಹಿಸಬಹುದು.ಮೊದಲ ಸುತ್ತಿನಲ್ಲಿ 50 ಅಂಕಗಳ ಬಹುಆಯ್ಕೆ ಮಾದರಿಯ ಸುತ್ತು , ಈ ಸುತ್ತಿನಲ್ಲಿ ಅತಿಹೆಚ್ಚು ಅಂಕಗಳಿಸಿದ ಮೊದಲ 12 ಅಭ್ಯರ್ಥಿಗಳು ಎರಡನೇ ಸುತ್ತಿಗೆ ಆಯ್ಕೆಯಾಗುತ್ತಾರೆ. ಈ 12 ಅಭ್ಯರ್ಥಿಗಳನ್ನು 6 ತಂಡಗಳಾಗಿ ವಿಂಗಡಿಸಿ ಎರಡನೇ ಹಂತದ ಮೌಖಿಕ ಸುತ್ತು ನಡೆಸಲಾಗುವುದು.ವಿಜೇತ ತಂಡಗಳಿಗೆ 50 ಸಾವಿರ ರೂ. ಪ್ರಥಮ ಬಹುಮಾನ ,30 ಸಾವಿರ ರೂ.ದ್ವಿತೀಯ ಬಹುಮಾನ ಹಾಗೂ 20 ಸಾವಿರ ರೂ.ಗಳ ತೃತೀಯ ಬಹುಮಾನ ನೀಡಲಾಗುವುದು. ಭಾಗವಹಿಸಿದ ಎಲ್ಲರಿಗೂ ಪ್ರಮಾಣ ಪತ್ರ ನೀಡಲಾಗುವುದು. ರಸಪ್ರಶ್ನೆ ಸ್ಪರ್ಧೆಯ ಪಠ್ಯ ಡಾ.ಬಿ.ಆರ್. ಅಂಬೇಡ್ಕರ್ ಅವರ ಜೀವನ ಮತ್ತು ಶಿಕ್ಷಣ, ರಾಷ್ಟ್ರೀಯ ಹೋರಾಟ,ಭಾರತ ಸಂವಿಧಾನ ರಚನೆ,ಶಿಕ್ಷಣ, ಸಂಘಟನೆ,ಹೋರಾಟ ತತ್ವಗಳು, ಚಿಂತನೆಗಳು, ಮೀಸಲಾತಿ,ಮಹಿಳಾ ಹಕ್ಕುಗಳು,ಜಾಗತಿಕ ಮಹಾನಾಯಕರಾಗಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಪ್ರಸ್ತುತ ದಿನಮಾನ.

ಆಸಕ್ತರು ಏಪ್ರಿಲ್ 11 ರ ಒಳಗಾಗಿ ಈ ಮೊಬೈಲ್ ನಂಬರುಗಳ ಮೂಲಕ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದ್ದು,ಹೆಚ್.ಎಸ್.ತೆಮಿನಾಳ-9740421421,ಶ್ರೀನಿವಾಸ ದೇಸಾಯಿ-9845808941,ಸುರೇಶ್ ಅಂಕೋಲಿ-9901797951,ಅಮರೇಗೌಡ-9902180043 ಅಥವಾ ಭರಮಪ್ಪ ಪಿ-9731799080 ಮೂಲಕ ಸಂಪರ್ಕಿಸಬಹುದು ಎಂದು ಕುಷ್ಟಗಿ ವೃತ್ತದ ಪೊಲೀಸ್ ಇನ್ಸ್‌ಪೆಕ್ಟರ್ ವಿಶ್ವನಾಥ ಹಿರೇಗೌಡರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಂಪ್ಲಿ: ಆಸ್ತಿ ತೆರಿಗೆಯಲ್ಲಿ ಶೇ.05 ರಷ್ಟು ಏರಿಕೆ

ಬಳ್ಳಾರಿ,ಏ.07- ಕಂಪ್ಲಿ ಪುರಸಭೆ ವ್ಯಾಪ್ತಿಯಲ್ಲಿ ಬರುವ ವಸತಿ ಮತ್ತು ವಾಣಿಜ್ಯ ಉದ್ದೇಶದ ಆಸ್ತಿಗಳ ತೆರಿಗೆಯನ್ನು 2026-27ನೇ ಸಾಲಿಗೆ ಅನ್ವಯವಾಗುವಂತೆ ಹೆಚ್ಚಳ ಮಾಡಲಾಗಿದೆ ಎಂದು ಕಂಪ್ಲಿ ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ನಗರಾಡಳಿತ ನಿರ್ದೇಶನಾಲಯದ ಸುತ್ತೋಲೆ ಮತ್ತು ಕರ್ನಾಟಕ ಪುರಸಭೆಗಳ ಕಾಯ್ದೆ 1964ರ ತಿದ್ದುಪಡಿ ನಿಯಮಗಳನ್ವಯ ಈ ಕ್ರಮ ಕೈಗೊಳ್ಳಲಾಗಿದೆ. ಸರ್ಕಾರದ ಮಾರ್ಗಸೂಚಿಯಂತೆ ಆಸ್ತಿ ತೆರಿಗೆಯನ್ನು ಮಾರುಕಟ್ಟೆ ಮೌಲ್ಯದ ಆಧಾರದ ಮೇಲೆ ಪರಿಷ್ಕರಿಸುವುದು ಕಡ್ಡಾಯವಾಗಿದೆ. ಕಂಪ್ಲಿ ಪುರಸಭೆ ವ್ಯಾಪ್ತಿಯ ಎಲ್ಲಾ ಆಸ್ತಿ ಮಾಲೀಕರಿಗೆ ಈ ಪರಿಷ್ಕೃತ ದರ ಅನ್ವಯವಾಗಲಿದೆ. ವಸತಿ ಆಸ್ತಿಗಳಿಗೆ ಶೇ.05 ರಷ್ಟು ತೆರಿಗೆ ಹೆಚ್ಚಳ, ವಾಣಿಜ್ಯ ಮತ್ತು ಕೈಗಾರಿಕಾ ಆಸ್ತಿಗಳ ಖಾಲಿ ನಿವೇಶನ ಹಾಗೂ ಕಟ್ಟಡಗಳಿಗೆ ಶೇ.05 ರಷ್ಟು ತೆರಿಗೆ ಹೆಚ್ಚಳ ಮಾಡಲಾಗಿದ್ದು, ಈ ಹೊಸ ದರಗಳು 2026-27ನೇ ಆರ್ಥಿಕ ಸಾಲಿಗೆ ಅನ್ವಯವಾಗಲಿವೆ.

ಆಸ್ತಿ ಮಾಲೀಕರು ಈ ಬದಲಾವಣೆಯನ್ನು ಗಮನಿಸಿ, ಪರಿಷ್ಕೃತ ದರದಂತೆ ತೆರಿಗೆ ಪಾವತಿಸಿ ಪುರಸಭೆಯೊಂದಿಗೆ ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ಕಾರ್ಮಿಕ ಇಲಾಖೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

ಬಾಲ್ಯ ಕಾರ್ಮಿಕ ಪದ್ಧತಿ ತಡೆಗೆ ವಿವಿಧ ಇಲಾಖೆಗಳು ಸಹಕಾರ ನೀಡಿ: ಎಡಿಸಿ ಶಿವಾನಂದ

ನಿರ್ದೇಶನಗಳನ್ನು ನೀಡಬೇಕು ಅಪರ ಜಿಲ್ಲಾಧಿಕಾರಿ ಸೂಚಿಸಿದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆ-2006ರ ಪ್ರಕಾರ 18ವರ್ಷದೊಳಗಿನ ಯಾವುದೇ ಹೆಣ್ಣು ಮಕ್ಕಳಿಗೆ ಹಾಗೂ 21 ವರ್ಷದೊಳಗಿನ ಗಂಡು ಮಕ್ಕಳಿಗೆ ಮದುವೆಯಾದಲ್ಲಿ ಅದನ್ನು ಬಾಲ್ಯ ವಿವಾಹ ಎಂದು ಪರಿಗಣಿಸಲಾಗಿದೆ. ಕಾಯ್ದೆಯ ಪ್ರಕಾರ ಬಾಲ್ಯ ವಿವಾಹ ಆದಲ್ಲಿ ಹುಡುಗ, ಹುಡುಗಿಯ ತಂದೆ ತಾಯಿ ಅಲ್ಲದೇ ಸಂಬಧಟ್ಟ ಎಲ್ಲರ ವಿರುದ್ಧ ತಪ್ಪಿತಸ್ಥರಿಗೆ ಕಾರಾಗೃಹವಾಸ ಹಾಗೂ ದಂಡ ವಿಧಿಸುವ ಅವಕಾಶವಿದ್ದು, ಕಾಯ್ದೆ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಪೊಲೀಸ್ ಇಲಾಖೆಯಿಂದ ಬಾಲ ಕಾರ್ಮಿಕರ ಪದ್ಧತಿ ನಿರ್ಮೂಲನೆಗೆ ಅಗತ್ಯ ಸಹಕಾರ ನೀಡಲಾಗುವುದು. ಜಿಲ್ಲೆಯ ಯಾವುದೇ ಠಾಣೆಯಲ್ಲಿ ಇಂತಹ ಪ್ರಕರಣಗಳನ್ನು ದಾಖಲಿಸಲು ಹಿಂದೆಟ್ಟು ಹಾಕಿದ್ದಲ್ಲಿ, ತಕ್ಷಣ ನಮ್ಮ ಗಮನಕ್ಕೆ ತರಬೇಕೆಂದು ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಕಾರ್ಮಿಕ ಇಲಾಖೆಯ ಜಿಲ್ಲಾ ಅಧಿಕಾರಿ ಆರತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಪುಷ್ಪ, ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುನಾಥ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಹಿಮೋಫಿಲಿಯಾ ಲಸಿಕೆಗೆ ಚಾಲನೆ

ಮಕ್ಕಳು ಇದರ ಸದುಪಯೋಗ ಪಡೆಯಲಿ: ಡಾ.ಸುರೇಂದ್ರ

ಲಿಯಾ ಎ ಫ್ಯಾಕ್ಟರ್ 8ರ ರೋಗದ ದುಗುಡವನ್ನು ದೂರ ಮಾಡಲು ದೇಶದಲ್ಲಿಯೇ ಕರ್ನಾಟಕ ಸರಕಾರವು ಉಚಿತವಾಗಿ ಹೆಮಿಲಿಬ್ರಾ ಲಸಿಕೆ ನೀಡಲು ಆರಂಭಿಸಿದೆ ಎಂದರು.

ಕುಸುಮ ಸಂಜೀವಿನಿ ಯೋಜನೆಯಡಿ ಉಚಿತವಾಗಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ

ಒಂದು ಮಗುವಿಗೆ ವರ್ಷಕ್ಕೆ ಸುಮಾರು 5 ಲಕ್ಷ ಮೌಲ್ಯದ ಇಂಜೆಕ್ಷನ್ ಅನ್ನು ಸಂಪೂರ್ಣ ಉಚಿತವಾಗಿ ನೀಡಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಶಸ್ತ ಚಿಕಿತ್ಸ ಕ ಡಾ.ವಿಜಯಶಂಕರ್ ಅವರು ಮಾತನಾಡಿ, ಪ್ರತಿ ತಿಂಗಳು ಒಂದನೇಯ ಶನಿವಾರದಂದು ರಿಮ್ಸ್ ಆಸ್ಪತ್ರೆಯ ಮಕ್ಕಳ ವಿಭಾಗದಲ್ಲಿ ಚುಚ್ಚು ಮದ್ದು ನೀಡಲಾಗುತ್ತದೆ. ಸಾಂಕ್ರಾಮಿಕ ರೋಗವಲ್ಲದ ಆನುವಂಶಿಕ ಖಾಯಿಲೆಯಾಗಿದ್ದು, ಪದೆಪದೆ ಬರುವ ನೋವನ್ನು ಚುಚ್ಚುಮದ್ದು ಕಡಿಮೆ ಮಾಡುತ್ತದೆ. ಅಲ್ಲದೆ

ಆಗಾಗ್ಗೆ ಉಂಟಾಗುವ ರಕ್ತಸ್ರಾವದಿಂದ ರಕ್ಷಿಸುವ ಕಾರ್ಯ ಮಾಡುತ್ತದೆ ಎಂದರು.

ಹಿಮೋಫಿಲಿಯಾದ ಪ್ರಮುಖ ಕಾರಣ: ಇದು ಹೆಚ್ಚಾಗಿ ತಳಿ ಅಥವಾ ವಂಶವಾಹಿ ಮೂಲಕ ಪೋಷಕರಿಂದ ಮಗುವಿಗೆ ಹರಡುತ್ತದೆ, ಮುಖ್ಯವಾಗಿ ಪುರುಷರಲ್ಲಿ ಹೆಚ್ಚು ಕಂಡುಬರುತ್ತದೆ. ಸಣ್ಣ ಗಾಯಗಳಿಗೂ ಅತಿಯಾದ ರಕ್ತಸ್ರಾವ, ಕೀಲುಗಳಲ್ಲಿ ಆಂತರಿಕ ರಕ್ತಸ್ರಾವ, ಮೂಗೇಟುಗಳು ಮತ್ತು ಮೂಗಿನಿಂದ ರಕ್ತಸ್ರಾವ ಬರುತ್ತದೆ ಎಂದು ಜಿಲ್ಲಾ ಆರ್.ಸಿ.ಆರ್.ಅಧಿಕಾರಿ ಡಾ.ನಂದಿತಾ ಎಮ್.ಎನ್., ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ವೈದ್ಯಕೀಯ ಅಧೀಕ್ಷಕರಾದ ಡಾ.ಸೂರ್ಯಕಾಂತ ಎಮ್, ರಿಮ್ಸ್ ಕಾಲೇಜಿನ ಪ್ರಾಚಾರ್ಯರಾದ ಡಾ.ರಾಹುಲ್ ಸಿ ಕೀರ್ತೆ, ತಜ್ಞ ವೈದ್ಯ ಡಾ.ಬಸವರಾಜ್, ಮಕ್ಕಳ ತಜ್ಞರಾದ ಡಾ.ಸುಕಾಣಿ, ಡಾ.ನಸೀಮಾ ಬೇಗಂ, ಪೇಥಾಲಜಿಸ್ಟ್ ಡಾ.ರಶೀದ್, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದಿನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಏಪ್ರಿಲ್ 12ರಂದು ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆ

ಜರುಗಲಿದ್ದು, ಅರ್ಜಿ ಸಲ್ಲಿಸಿರುವ ಅರ್ಹ ವಿದ್ಯಾರ್ಥಿಗಳು ಸದರಿ ಪರೀಕ್ಷೆಗೆ ಕಡ್ಡಾಯವಾಗಿ ಹಾಜರಾಗುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: ಅಲ್ಪಸಂಖ್ಯಾತರ ಸಹಾಯವಾಣಿ 8277799990, 08022535902, ರಾಯಚೂರು 8496098631, 9731028420, 9731341815, 9686853719, 6361866571, 9108175899 ಅಥವಾ 9902906266, ಮಾನವಿ, ಸಿರವಾರ 7411771075, 886733478, ದೇವದುರ್ಗ 9731794252, 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು 8217621732, 9740871306 ಅಥವಾ 8660879712ಗೆ ಸಂಪರ್ಕಿಸುವತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೂಗಾರ ಸಮಾಜ ಸಂಘ ತಾಲೂಕ ಘಟಕ ಮಸ್ಕಿ ಶ್ರೀ ಶರಣ ಹೂಗಾರ ಮಾದಯ್ಯನವರ ಅದ್ದೂರಿ ಜಯಂತ್ಯೋತ್ಸವ



ಮಸ್ಕಿ, ಏ.6-

ಶ್ರೀ ಶಿವಶರಣ ಹೂಗಾರ ಮಾದಯ್ಯನವರ ಮೃತ ಉದ್ಘಾಟನಾ ಕಾರ್ಯಕ್ರಮಕ್ಕೆ ಶ್ರೀ ಶ್ರೀ ವರ ರುದ್ರಮನಿ ಶಿವಾಚಾರ್ಯ ಮಹಾ ಸ್ವಾಮಿಗಳು ಶ್ರೀ ಶ್ರೀ ಕೇಂದ್ರ ಮಹಾ ಸ್ವಾಮಿಗಳು ಸುಕ್ಷೇತ್ರ ಉಟಕನೂರ ಪೂಜರು ಇವರ ಅಮೃತಸ್ಥದಿಂದ ಕಾರ್ಯಕ್ರಮದ ಉದ್ಘಾಟನೆ ಚಾಲನೆ ನೀಡಲಾಯಿತು..

ದಿವ್ಯ ಸಾನಿಧ್ಯವನ್ನು ವರ ರುದ್ರಮುನಿ ಶಿವಾಚಾರ್ಯ ಮಹಾ ಸ್ವಾಮಿಗಳು ವಹಿಸಿಕೊಂಡಿದ್ದರು ಬಸಣ್ಣ ಹೂಗಾರ್ ಗೌರವ ಅಧ್ಯಕ್ಷರು ವೀರೇಶ್ ಉಗಾರ್ ಬಸಾಪುರ ಅಧ್ಯಕ್ಷರು ಬಸವರಾಜ್ ಉಪಾಧ್ಯಕ್ಷರು ಶಶಿಧರ್ ಹೂಗಾರ್ ರಾಯಚೂರು ಗ್ರಾಮೀಣ ಹೂಗಾರ ಸಮಾಜದ ಅಧ್ಯಕ್ಷರು ಮಲ್ಲಪ್ಪ ಹೂಗಾರ್ ಮುದುಗಲ್ ಅಧ್ಯಕ್ಷರು ಲಿಂಗಸೂರ್ ತಾಲ್ಲೂಕು ಸಮಾಜ ಭೀಮಣ್ಣ ಹೂಗಾರ್ ಅಧ್ಯಕ್ಷರು ಸಿಂಧನೂರು ತಾಲೂಕು ಹೂಗಾರ ಸಮಾಜ ಶಂಕರ್ ಹೂಗಾರ್ ಅಧ್ಯಕ್ಷರು ದೇವ ದುರ್ಗ ತಾಲೂಕು ಹೂಗಾರ್ ಸಮಾಜ ಹಾಗೂ ಮಸ್ಕಿ ತಾಲೂಕಿನ ಎಲ್ಲ ಪದಾಧಿಕಾರಿಗಳು ಮತ್ತು ಎಲ್ಲಾ ತಾಲೂಕಿನ ಬಂಧುಗಳು ಜಿಲ್ಲಾ ಸಮಿತಿಯವರು ತಾಲೂಕ ಸಮಿತಿಯವರು ಸಮಸ್ತ ಮಸ್ಕಿ ತಾಲೂಕಿನ ಬಂಧುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ನಡೆದಾಡುವ ದೇವರು ಪೂಜ್ಯಶ್ರೀ ರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಹೂಗಾರ ಸಮಾಜ ಬಹಳ ಒಂದು ಸುಂದರ ಸಮಾಜ ಈ ಸಮಾಜದಲ್ಲಿ ಎಲ್ಲರೂ ಅನನ್ಯವಾಗಿ ಬದುಕು ಸಾಗಿಸಿದಾಗ ಮಾತ್ರ ಸಮಾಜದಲ್ಲಿ ಮುಂದೆ ಬರಲು ಸಾಧ್ಯವಾಗುತ್ತದೆ ಸಮಾಜ ಹಾಗು ಹೂಗಾರ್ ಸಮಾಜ ಎಲ್ಲ ಸಮಾಜದ ಬಾಂಧವರ ಜೊತೆ ತುಂಬಾ ಅನನ್ಯಬಾಂಧವ ಬಂದಿದ್ದು ಸಮಾಜದಲ್ಲಿ ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಮುಂದುವರೆಯ ಬೇಕು ಹೂಗಾರ್ ಸಮಾಜ ಅತ್ಯಂತ ಹಿಂದುಳಿದ ಸಮಾಜ ವಾಗಿದ್ದು ಈ ಸಮಾಜದಲ್ಲಿ ಎಲ್ಲರೂ ಸಮಾಜದ ಬಾಂಧವರು ಭೇದಭಾವವಿಲ್ಲದೆ ಮನಸ್ತಾಪವಿಲ್ಲದೆ ಒಗ್ಗಟ್ಟಾಗಿ ಸೇರಿ ಸಂಘಟನೆ ಮಾಡಿದಾಗ ಮಾತ್ರ ಸಮಾಜ ಅಭಿವೃದ್ಧಿಯಾಗಲು ಸಾಧ್ಯ ಎಂದು ಆಶೀರ್ವಚನ ನೀಡಿದರು.

ಸಮಾಜದ ಬಂಧುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು. ವಿರೂಪಾಕ್ಷಯ್ಯ ಸ್ವಾಮಿ ಸಾಲಿಮಠ ಅಂತರಗಂಗೆ ಮಸ್ಕಿ

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ



ಜಿಲ್ಲೆಯಲ್ಲಿ ರಸಗೊಬ್ಬರ ದಾಸ್ತಾನು ಕೊರತೆ ಇಲ್ಲ: ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್

ಕಲಬುರಗಿ,ಏ.07-

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಈ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಗೆ ಉತ್ತಮ ಮಳೆಯಾಗುವ ಸಾಧ್ಯತೆ ಇದೆ. ಇದನ್ನು ಮನಗಂಡು ಜಿಲ್ಲೆಯಲ್ಲಿ ಡಿ.ಎ.ಪಿ, ಯೂರಿಯಾ ಸೇರಿದಂತೆ ವಿವಿಧ ರಸಗೊಬ್ಬರಗಳ ಒಟ್ಟು 35,785 ಮೆಟ್ರಿಕ್ ಟನ್ ದಾಸ್ತಾನು ಲಭ್ಯವಿದ್ದು, ಯಾವುದೇ ಕೊರತೆ ಇರುವುದಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ತಿಳಿಸಿದ್ದಾರೆ.

ನಗರದ ಹಳೆಯ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಮುಂಗಾರು ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಯೂರಿಯಾ ಮಾರಾಟಕ್ಕೆ ರೈತರ ಫಾರ್ಮರ್ ಐಡಿ (ಎಫ್‌ಐಡಿ) ಸಂಖ್ಯೆ ಕಡ್ಡಾಯಗೊಳಿಸಲಾಗಿದೆ ಎಂದು ಹೇಳಿದರು. ಕೆ-ಕಿಸಾನ್ ತಂತ್ರಾಂಶದಲ್ಲಿ ರೈತರ ವಿವರ ನಮೂದಿಸಿ, ಅವರ ಜಮೀನಿನ ವಿಸ್ತೀರ್ಣ ಮತ್ತು ಬೆಳೆ ಆಧಾರದ ಮೇಲೆ ಅಗತ್ಯ ಪ್ರಮಾಣದ ಯೂರಿಯಾ ಮಾತ್ರ ವಿತರಣೆ ಮಾಡಲಾಗುತ್ತದೆ ಎಂದು ವಿವರಿಸಿದರು.

ನಿಗದಿತ ದರಕ್ಕಿಂತ ಹೆಚ್ಚು ಬೆಲೆಗೆ ಮಾರಾಟ ಮಾಡಿದರೆ ಅಥವಾ ಕೃಷಿಯೇತರ ಉದ್ದೇಶಗಳಿಗೆ ಗೊಬ್ಬರ ವಿತರಿಸಿದರೆ ರಸಗೊಬ್ಬರ ನಿಯಂತ್ರಣ ಕಾಯ್ದೆ 1985 ಹಾಗೂ ಅಗತ್ಯ ವಸ್ತುಗಳ ಕಾಯ್ದೆ 1955ರ ಅಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಇದೇ ವೇಳೆ, ಅಧಿಕ ಪ್ರಮಾಣದಲ್ಲಿ ಯೂರಿಯಾ ಬಳಕೆಯನ್ನು ತಗ್ಗಿಸಲು ಸಂಯುಕ್ತ ರಸಗೊಬ್ಬರಗಳಾದ 20:20:0:13, 14:35:14, 15:15:15, 10:26:26, 12:32:16, 22:22:11 ಮುಂತಾದ ಗೊಬ್ಬರಗಳನ್ನು ಬಳಸುವಂತೆ ರೈತರಿಗೆ ಸಲಹೆ ನೀಡಲಾಗಿದೆ.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ (ಜಾರಿದಳ) ಶಿವಕುಮಾರ ಪ್ರಸಾದ್ ಮಾತನಾಡಿ, ಯಾವುದೇ ಕಾರಣಕ್ಕೂ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳ ಕೃತಕ ಅಭಾವ ಸೃಷ್ಟಿಸಬಾರದು. ಹೆಚ್ಚುವರಿ ದರಕ್ಕೆ ಮಾರಾಟ ಕಂಡುಬಂದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಿದರು.

ಸಭೆಯಲ್ಲಿ ಕಲಬುರಗಿ ವಿಭಾಗದ ಉಪ ಕೃಷಿ ನಿರ್ದೇಶಕ (ಜಾರಿದಳ) ರಾದ ಮೃತ್ಯಂಜಯ ಪತಂಗೆ, ಕಲಬುರಗಿ ಜಿಲ್ಲೆಯ ಎಲ್ಲಾ ಸಹಾಯಕ ಕೃಷಿ ನಿರ್ದೇಶಕರು, ಸಹಾಯಕ ಕೃಷಿ ನಿರ್ದೇಶಕರು, (ಜಾರಿದಳ), ಕಲಬುರಗಿ, ಕೃಷಿ ಅಧಿಕಾರಿಗಳು, ಜಿಲ್ಲೆಯ ಕೃಷಿ ಪರಿಕರ ಮಾರಾಟಗಾರರ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಜಿಲ್ಲೆಯ ಕೃಷಿ ಪರಿಕರ ವಿತರಕರು ಉಪಸ್ಥಿತರಿದ್ದರು.



ಡಾ.ಬಾಬು ಜಗಜೀವನ ರಾಂ ಜಯಂತಿ ಸರಳ ಆಚರಣೆ

ವಿಜಯನಗರ,,ಏ.07-

ಹಸಿರು ಕ್ರಾಂತಿಯ ಹರಿಕಾರರು ಹಾಗೂ ಸಾಮಾಜಿಕ ನ್ಯಾಯದ ಹೋರಾಟಗಾರರಾದ ಡಾ. ಬಾಬು ಜಗಜೀವನ ರಾಂ ಅವರ 119ನೇ ಜಯಂತಿಯನ್ನು ವಿಜಯನಗರ ಜಿಲ್ಲಾಡಳಿತ ಭಾನುವಾರ ಸರಳ ಮತ್ತು ಸಾಂಕೇತಿಕವಾಗಿ ಆಚರಿಸಿತು.

ನಗರದ ನಗರಾಭಿವೃದ್ಧಿ ಪ್ರಾಧಿಕಾರ ಕಚೇರಿ ಸಮೀಪ ಇರುವ ಡಾ. ಬಾಬು ಜಗಜೀವನ ರಾಂ ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕಿ ಎಸ್. ಜಾಹ್ನವಿ ಪುಷ್ಪನಮನ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಧಿಕಾರಿಗಳು, ಡಾ. ಬಾಬು ಜಗಜೀವನ ರಾಂ ಅವರು ಸಾಮಾಜಿಕ ಸಮಾನತೆ, ದಲಿತರ ಹಕ್ಕುಗಳು ಹಾಗೂ ಕೃಷಿ ಕ್ಷೇತ್ರದಲ್ಲಿ ನೀಡಿದ ಕೊಡುಗೆಗಳು ದೇಶಕ್ಕೆ ದಾರಿದೀಪವಾಗಿವೆ ಎಂದು ಹೇಳಿದರು.

ಅವರ ಜೀವನ ಸಂದೇಶಗಳು ಇಂದಿನ ಯುವ ಪೀಳಿಗೆಗೆ ಮಾರ್ಗದರ್ಶಕವಾಗಿದ್ದು, ಶೋಷಿತ ವರ್ಗಗಳ ಅಭಿವೃದ್ಧಿಗೆ ಅವರು ಸಲ್ಲಿಸಿದ ಸೇವೆ ಅಪಾರವಾಗಿದೆ. ಹಸಿರು ಕ್ರಾಂತಿಯಲ್ಲಿ ಅವರ ಪಾತ್ರವು ಭಾರತದ ಕೃಷಿ ಅಭಿವೃದ್ಧಿಗೆ ಮಹತ್ವದ ಕೊಡುಗೆಯಾಗಿದೆ ಎಂದು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೆ. ತಿಮ್ಮಪ್ಪ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ವೈ. ಎ. ಕಾಳೆ, ತಹಶೀಲ್ದಾರ್ ಶೃತಿ ಎಂ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿ ಆಲಂ ಭಾಷಾ, ನಗರಸಭೆ ಪೌರಾಯುಕ್ತ ಶಿವಕುಮಾರ್ ಸೇರಿದಂತೆ ವಿವಿಧ ಅಧಿಕಾರಿಗಳು, ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಬಿಜೆಪಿ ಕಚೇರಿಯಲ್ಲಿ ಬಾಬು ಜಗಜೀವನ್ ರಾಮ್ ಜಯಂತಿ

ವಾಡಿ,ಏ.07-

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ರವಿವಾರ ಭಾರತದ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ್ ರಾವ್ ಅವರ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಜಿಲ್ಲಾ ಹಿಂದುಳಿದ ವರ್ಗಗಳ ಉಪಾಧ್ಯಕ್ಷ ಬಸವರಾಜ ಪಂಚಾಳ, ಸಮಾಜ ಸುಧಾರಣೆ ಶ್ರಮಿಸಿದ ಬಾಬು ಜಗಜೀವನ್ ರಾಮ್ ಅವರು ದೇಶದಲ್ಲಿರಿವ ಎಲ್ಲರೂ ಸಮಾನವಾಗಿ ಬಾಳಬೇಕು. ಪರಸ್ಪರ ಗೌರವ ಕೊಡುವುದನ್ನು ರೂಢಿಸಿಕೊಳ್ಳಬೇಕು ಎನ್ನುವ ಮಹತ್ವಾಕಾಂಕ್ಷೆಯನ್ನು ಅವರು ಹೊಂದಿದ್ದರು ಎಂದರು. ಕಾರ್ಮಿಕರ ಏಳಿಗೆಯನ್ನು ಸದಾ ಬಯಸುತ್ತಿದ್ದ ಅವರು ದೇಶದಲ್ಲಿ ಆಹಾರ ಕೊರತೆ ಎದುರಾದಾಗ ಹಸಿರು ಕ್ರಾಂತಿ ಮಾಡುವ ಮೂಲಕ ಜನರ ಜೀವನ ಮಟ್ಟವನ್ನು ಸುಧಾರಣೆ ಮಾಡಿದರು. ಇಂತಹ ಮಹಾನ್ ನಾಯಕರ ಕೊಡುಗೆ, ತತ್ವಾದರ್ಶಗಳನ್ನು ನಾವುಗಳು ಪಾಲಿಸಬೇಕು. ನಮ್ಮ ಯುವಜನತೆಗೆ ಇಂತಹ ನಾಯಕರನ್ನು ಮಾದರಿಯಾಗಿ ಸ್ವೀಕರಿಸಿ ಅವರ ಆಶಯದಂತೆ ತಮ್ಮ ಜೀವನ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಬಿಜೆಪಿ ಅಧ್ಯಕ್ಷ ವೀರಣ್ಣ ಯಾರಿ ಮಾತನಾಡಿ, ಬಾಬು ಜಗಜೀವನ್ ರಾಮ್ ಅವರು ದೇಶ ಕಂಡ ಮಹಾನ್ ಸ್ವಾತಂತ್ರ್ಯ ಹೋರಾಟಗಾರರು ಹಾಗೂ ದಕ್ಷ ಆಡಳಿತಗಾರರಾಗಿದ್ದರು ಎಂದರು.

ಮಾದಿಗ ಸಮಾಜದ ಅಧ್ಯಕ್ಷ ಹಾಗೂ ಬಿಜೆಪಿ ಜಿಲ್ಲಾ ಎಸ್.ಸಿ.ಮೋರ್ಚಾದ ಉಪಾಧ್ಯಕ್ಷರಾಗಿ ಆಯ್ಕೆಯಾದ ರಾಜು ಮುಕ್ಕಣ್ಣ ಅವರು ಅಭಿನಂದಿಸಲಾಯಿತು. ಈ ಸಂಧರ್ಭದಲ್ಲಿ ಸ್ಥಳೀಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ರವಿ ನಾಯಕ, ಎಸ್ಸಿ . ಮೋರ್ಚಾ ಅಧ್ಯಕ್ಷ ದೌಲತರಾವ ಚಿತ್ತಾಪುರಕರ, ಮುಖಂಡರಾದ ಹರಿ ಗಲಾಂಡೆ, ರಿಚರ್ಡ್ ಮಾರೆಡ್ಡಿ, ಭೀಮರಾವ ಸುಬೇದಾರ, ಮಲ್ಲಿಕಾರ್ಜುನ ಸಾತಖೇಡ, ಕುಮಾರ ರಡ್ಡಿ, ನಿರ್ಮಲ ಇಂಡಿ, ಯಂಕಮ್ಮ ಗೌಡಗಾಂವ, ಉಮಾಭಾಯಿ ಗೌಳಿ, ಹಾಜಪ್ಪ ಬಂಡಾರಿ, ರವಿ ಸೇರಿದಂತೆ ಇತರರು ಪಾಲ್ಗೊಂಡಿದ್ದರು.

ಜಿಲ್ಲಾ ಆರೋಗ್ಯ ಇಲಾಖೆ ಸಿಬ್ಬಂದಿಗೆ ಜನಗಣತಿ 2027' ಸ್ವಯಂ-ಗಣತಿ ತರಬೇತಿ ಕಾರ್ಯಾಗಾರ

ಬಳ್ಳಾರಿ,ಏ.07-

ಭಾರತ ಸರ್ಕಾರದ ಮಹತ್ವಾಕಾಂಕ್ಷೆಯ 2027ರ ಜನಗಣತಿಯ ಮೊದಲ ಹಂತವಾದ ಮನೆಪಟ್ಟಿ ಮತ್ತು ಮನೆ ಗಣತಿ ಪ್ರಕ್ರಿಯೆಗೆ ಪೂರ್ವಭಾವಿಯಾಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಶನಿವಾರ ಡಿಹೆಚ್‌ಓ ಸಭಾಂಗಣದಲ್ಲಿ ಸ್ವಯಂ-ಗಣತಿ' ಕುರಿತ ವಿಶೇಷ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಜೆ.ಮಂಜುನಾಥ್ ಅವರು ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿ, ಈ ಬಾರಿ ಜನಗಣತಿಯಲ್ಲಿ ಡಿಜಿಟಲ್ ವ್ಯವಸ್ಥೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಸಾರ್ವಜನಿಕರು ತಾವಾಗಿಯೇ ಮಾಹಿತಿಯನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಕರ್ನಾಟಕದಲ್ಲಿ ಏಪ್ರಿಲ್ 1 ರಿಂದ 15 ರವರೆಗೆ (15 ದಿನಗಳು) ಈ ಸೌಲಭ್ಯ ಲಭ್ಯವಿದೆ ಎಂದು ತಿಳಿಸಿದರು.

ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಿ, ಮೊಬೈಲ್ ಓಟಿಪಿ ಮೂಲಕ ಲಾಗಿನ್ ಆಗಿ ತಮ್ಮ ಕುಟುಂಬದ ವಿವರಗಳನ್ನು ಸಲ್ಲಿಸಬಹುದಾಗಿದೆ. ವಿವರ ಸಲ್ಲಿಕೆಯ ನಂತರ ಸಿಗುವ ಸೆಲ್ಫ್ ಎನ್ಯುಮರೇಶನ್ ಐಡಿ' (ಎಸ್‌ಇ ಐಡಿ) ಅನ್ನು ಗಣತಿದಾರರು ಮನೆಗೆ ಬಂದಾಗ ತೋರಿಸುವುದು ಕಡ್ಡಾಯವಾಗಿದೆ. ಹಾಗಾಗಿ ಈ ಕುರಿತು ಸಾರ್ವಜನಿಕರಿಗೆ ಹೆಚ್ಚು ಮಾಹಿತಿ ನೀಡುತ್ತಾ, ಡಿಜಿಟಲ್ ಮ್ಯಾಪಿಂಗ್ ಮತ್ತು ಆನ್‌ಲೈನ್ ಡೇಟಾ ಸಂಗ್ರಹಣೆಯ ಸೂಕ್ಷ್ಮತೆಗಳನ್ನು ವಿವರಿಸಿದರು.

ತಹಶೀಲ್ದಾರ್ ಕಚೇರಿ ಅಧಿಕಾರಿಯ ಪರಶುರಾಮ್ ಅವರು ಮಾತನಾಡಿ, ಸ್ವಯಂ-ಗಣತಿ ಮಾಡಿಕೊಳ್ಳಲು ಸಾಧ್ಯವಾಗದವರಿಗಾಗಿ ಗಣತಿದಾರರು ಎಂದಿನತೆ ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆ. ಇದು ಕೇವಲ ಒಂದು ಹೆಚ್ಚುವರಿ ಮತ್ತು ಸುಲಭವಾದ ಡಿಜಿಟಲ್ ಆಯ್ಕೆಯಾಗಿದೆ ಎಂದು ತಿಳಿಸಿದರು. ಸ್ವಯಂ ಗಣತಿ ಪ್ರಕ್ರಿಯೆಯಿಂದ ಸಮಯದ ಉಳಿತಾಯ ವಾಗುವುದಲ್ಲದೆ, ಅತ್ಯಂತ ನಿಖರವಾದ ಮಾಹಿತಿ ಸಂಗ್ರಹಿಸಲು ಸಾಧ್ಯವಾಗುತ್ತದೆ. ಸಾರ್ವಜನಿಕರು ನೀಡುವ ಎಲ್ಲಾ ಮಾಹಿತಿಗಳು ಸಂಪೂರ್ಣ ಗೌಪ್ಯವಾಗಿರುತ್ತವೆ. ಈ ಕುರಿತು ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಡಬೇಕು ಎಂದು ತಿಳಿಸಿದರು.

ಈ ವೇಳೆ ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ. ಹನುಮಂತಪ್ಪ, ಜಿಲ್ಲಾ ಕ್ಷಯರೋಗ ನಿರ್ಮೂಲನ ಅಧಿಕಾರಿ ಡಾ. ಇಂದ್ರಾಣಿ, ಜಿಲ್ಲಾ ಅಸಾಂಕ್ರಾಮಿಕ ರೋಗ ಘಟಕದ ಅಧಿಕಾರಿ ಡಾ. ವೀರೇಂದ್ರ ಕುಮಾರ್, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿ ಖುರ್ಶಿದ್ ಬೇಗಮ್ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿ- ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.



ಜನಸ್ನೇಹಿ ಪೊಲೀಸ್ ವ್ಯವಸ್ಥೆಗೆ ಒತ್ತು: ಡಿಜಿಪಿ ಎಂ.ಎ.ಸಲೀಮ್ ಸೂಚನೆ

ಬಳ್ಳಾರಿ,ಏ.07-

ರಾಜ್ಯದ ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾನಿರೀಕ್ಷಕರಾದ ಡಾ. ಎಂ.ಎ. ಸಲೀಮ್ ಅವರು ಸೋಮವಾರ ಜಿಲ್ಲಾ ಪೊಲೀಸ್ ಕಚೇರಿಯ ಸಭಾಂಗಣದಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ವಿಮರ್ಶಾ ಸಭೆ ನಡೆಸಿದರು.

ಸಭೆಯಲ್ಲಿ ಮಾತನಾಡಿದ ಅವರು, ಪೊಲೀಸ್ ಇಲಾಖೆ ಭ್ರಷ್ಟಾಚಾರಮುಕ್ತ, ನಿಷ್ಪಕ್ಷಪಾತ ಹಾಗೂ ಜನಸ್ನೇಹಿ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು. ಅನುಭವಿ ಅಧಿಕಾರಿಗಳು ತಮ್ಮ ಅನುಭವವನ್ನು ಕಿರಿಯ ಸಿಬ್ಬಂದಿಯೊಂದಿಗೆ ಹಂಚಿಕೊಂಡು, ಅವರ ನೈಪುಣ್ಯತೆಯನ್ನು ಹೆಚ್ಚಿಸಲು ಸಹಕರಿಸಬೇಕು ಎಂದು ತಿಳಿಸಿದರು.

ಇತ್ತೀಚೆಗೆ ಪೊಲೀಸ್ ಇಲಾಖೆಯಲ್ಲಿ ಅಳವಡಿಸಲಾಗುತ್ತಿರುವ ಅತ್ಯಾಧುನಿಕ ತಂತ್ರಜ್ಞಾನಗಳ ಕುರಿತು ಅಧಿಕಾರಿಗಳು ಸಮರ್ಪಕ ತರಬೇತಿ ಪಡೆದು, ತನಿಖಾ ಕಾರ್ಯಗಳಲ್ಲಿ ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಕುರಿತು ಹಲವು ಸಲಹೆಗಳನ್ನು ನೀಡಿದರು.

ಸಭೆಯ ನಂತರ ಡಿಎಆರ್ ಪೊಲೀಸ್ ವಸತಿ ಗೃಹ ಸಂಕೀರ್ಣಕ್ಕೆ ಭೇಟಿ ನೀಡಿ, ಅಲ್ಲಿರುವ ಅಧಿಕಾರಿ ಮತ್ತು ಸಿಬ್ಬಂದಿ ಕುಟುಂಬಗಳ ಸಮಸ್ಯೆಗಳು ಹಾಗೂ ಅಗತ್ಯಗಳನ್ನು ಆಲಿಸಿದರು. ಬಳಿಕ ಬಳ್ಳಾರಿ ನಗರದ ಬ್ರೂಸ್ ಪೇಟೆ ಪೊಲೀಸ್ ಠಾಣೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್, ಐಪಿಎಸ್ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳ ಸೇವಾ ಮನೋಭಾವ ಶ್ಲಾಘನೀಯ : ಡಾ.ಕರಿಗೂಳೇಶ್ವರ

ಕಲಬುರಗಿ,ಏ.07-

ಇಂದಿನ ಬಹುತೇಕ ಮಹಾವಿದ್ಯಾಲಯಗಳಲ್ಲಿ ರಾಷ್ಟ್ರೀಯ ಸೇವಾ ಯೋಜನೆ (ಎನ್.ಎಸ್.ಎಸ್.) ಘಟಕಗಳು ಇದ್ದರೂ, ಎನ್.ವಿ.ಕಾಲೇಜಿನ ವಿದ್ಯಾರ್ಥಿಗಳು ತೋರಿಸಿರುವ ಸೇವಾ ಮನೋಭಾವ ಅತ್ಯಂತ ಶ್ಲಾಘನೀಯ ಎಂದು ಡಾ.ಕರಿಗೂಳೇಶ್ವರ ಅಭಿಪ್ರಾಯಪಟ್ಟರು.

ಕಲಬುರಗಿ ತಾಲೂಕಿನ ಔರಾದ್ (ಬಿ) ಗ್ರಾಮದ ಶ್ರೀ ಸ್ವಾಮಿ ಸಮರ್ಥ ದೇವಸ್ಥಾನದ ಆವರಣದಲ್ಲಿ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯ, ಐ.ಕ್ಯೂ.ಎ.ಸಿ. ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಕೋಶದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮುಖ್ಯ ಅತಿಥಿಯಾಗಿ ಮಾತನಾಡಿದರು.

ಎನ್.ಎಸ್.ಎಸ್. ಶಿಬಿರಗಳು ವಿದ್ಯಾರ್ಥಿಗಳಿಗೆ ಸಮಯ ಪಾಲನೆ, ಶಿಸ್ತು ಹಾಗೂ ಹಸಿವಿನ ಮಹತ್ವವನ್ನು ತಿಳಿಸಿಕೊಡುವುದರ ಜೊತೆಗೆ ಅವರೊಳಗಿನ ಅಡಗಿರುವ ಪ್ರತಿಭೆಯನ್ನು ಹೊರತೆಗೆದೆಯುವ ವೇದಿಕೆಯಾಗಿವೆ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ನೂತನ ವಿದ್ಯಾಲಯ ಸಂಸ್ಥೆಯ ಕಾಲೇಜು ಶೈಕ್ಷಣಿಕ ಮಂಡಳಿಯ ಸದಸ್ಯರಾದ ಡಾ. ಸದಾಶಿವ ಆರ್. ಜಿಡಗೀಕರ್ ಮಾತನಾಡಿ, ಇಂತಹ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸಲು ನೆರವಾಗುತ್ತವೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮೋಹಿನಿ ಸದಾಶಿವ ಜಿಡಗೀಕರ್ ಕೂಡ ಮಾತನಾಡಿದರು.

ವೇದಿಕೆಯಲ್ಲಿ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಎನ್.ಎಸ್.ಎಸ್. ಅಧಿಕಾರಿ ಡಾ. ದಯಾನಂದ ಎಂ. ಶಾಸ್ತ್ರಿ, ಶ್ರೀಕಾಂತ್ ಪಂಡಿತ ಹಾಗೂ ಡಾ. ಮಲ್ಲಿನಾಥ ಎಸ್. ತಳವಾರ ಉಪಸ್ಥಿತರಿದ್ದರು.

ಟಿಎಂಎಇಎಸ್ ಪಾಲಿಟೆಕ್ನಿಕ್‌ನಲ್ಲಿ ಕ್ಯಾಂಪಸ್ ಸಂದರ್ಶನ: 129 ವಿದ್ಯಾರ್ಥಿಗಳ ಭಾಗಿ

ವಿಜಯನಗರ,ಏ.07-

ಕಿರ್ಲೋಸ್ಕರ್ ಫೆರಾರೋಸ್ ಇಂಡಸ್ಟ್ರೀಸ್ ಲಿಮಿಟೆಡ್ ವತಿಯಿಂದ ನಗರದ ಟಿಎಂಎಇಎಸ್ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಸೋಮವಾರ ಕ್ಯಾಂಪಸ್ ಸಂದರ್ಶನ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ವಿವಿಧ ಪಾಲಿಟೆಕ್ನಿಕ್ ಕಾಲೇಜುಗಳ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದರು.

ಈ ಕ್ಯಾಂಪಸ್ ಸಂದರ್ಶನದಲ್ಲಿ ಒಟ್ಟು 129 ವಿದ್ಯಾರ್ಥಿಗಳು ಹಾಜರಿದ್ದು, ವಿವಿಧ ವಿಭಾಗಗಳಿಂದ ಉತ್ತಮ ಸ್ಪಂದನೆ ವ್ಯಕ್ತವಾಯಿತು.

ವಿದ್ಯಾರ್ಥಿಗಳ ವಿಭಾಗವಾರು ಭಾಗವಹಿಸುವಿಕೆ ವಿವರಗಳು ಹೀಗಿವೆ : ಎಸ್‌ಎಂವಿ ಪಾಲಿಟೆಕ್ನಿಕ್‌ನಿಂದ ಎಲೆಕ್ಟ್ರಿಕಲ್ 13 ಮತ್ತು ಮೆಕ್ಯಾನಿಕಲ್ 30 ವಿದ್ಯಾರ್ಥಿಗಳು ಭಾಗವಹಿಸಿದರು. ಟಿ.ಎಂ.ಎ.ಇ.ಎಸ್ ಪಾಲಿಟೆಕ್ನಿಕ್‌ನಿಂದ ಎಲೆಕ್ಟ್ರಿಕಲ್ 24, ಮೆಕ್ಯಾನಿಕಲ್ 26 ಮತ್ತು ಮೆಟಲರ್ಜಿ 24 ವಿದ್ಯಾರ್ಥಿಗಳು ಭಾಗವಹಿಸಿದರು. ಇತರೆ ಕಾಲೇಜುಗಳಿಂದ ಎಲೆಕ್ಟ್ರಿಕಲ್, ಮೆಕ್ಯಾನಿಕಲ್ ಮತ್ತು ಮೆಟಲರ್ಜಿ ವಿಭಾಗಗಳಿಂದ ತಲಾ 1 ವಿದ್ಯಾರ್ಥಿ ಹಾಜರಾದರು. ಪಾಸ್‌ಔಟ್ ವಿದ್ಯಾರ್ಥಿಗಳಲ್ಲಿ ಮೆಕ್ಯಾನಿಕಲ್ 5 ಮತ್ತು ಎಲೆಕ್ಟ್ರಿಕಲ್ 4 ಮಂದಿ ಭಾಗವಹಿಸಿದರು. ಕಾರ್ಯಕ್ರಮದಲ್ಲಿ ಟಿ.ಎಂ.ಎ.ಇ.ಎಸ್ ಪಾಲಿಟೆಕ್ನಿಕ್ ಪ್ರಾಚಾರ್ಯರು, ಪ್ಲೇಸ್ಮೆಂಟ್ ಅಧಿಕಾರಿಗಳು ಹಾಗೂ ಕಂಪನಿಯ ಪ್ರತಿನಿಧಿಗಳು ಉಪಸ್ಥಿತರಿದ್ದು, ವಿದ್ಯಾರ್ಥಿಗಳಿಗೆ ಉದ್ಯೋಗಾ ವಕಾಶಗಳ ಕುರಿತು ಮಾರ್ಗದರ್ಶನ ನೀಡಿದರು.

ಕಂಪನಿಯ ಪರವಾಗಿ ರಮೇಶ್, ಶ್ರೀನಿವಾಸ ಎನ್, ಫಿದಾ ಹುಸೇನ್, ಬಸವರಾಜ್ ಎಂ, ಶಿವಕುಮಾರ್ ಹಾಗೂ ಶಿವಾನಂದ್ ಅವರು ಸಂದರ್ಶನ ಪ್ರಕ್ರಿಯೆ ನಡೆಸಿದರು. ಇಂತಹ ಕ್ಯಾಂಪಸ್ ಸಂದರ್ಶನಗಳು ಗ್ರಾಮೀಣ ಹಾಗೂ ನಗರ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳನ್ನು ಒದಗಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಅಭಿಪ್ರಾಯ ವ್ಯಕ್ತವಾಯಿತು.

ನಿಮ್ಮೂರು ಸುದ್ದಿ

ಸಂಪಾದಕೀಯ

ಮನರಂಜನೆಯ ನೆಪದಲ್ಲಿ ಬದುಕು ಬರಿದಾಗಿಸುತ್ತಿರುವ ಬಿಜೆಪಿ



ದೇಶದ ಯುವ ಜನತೆ ಆಟದಲ್ಲಿ ಮೈಮರೆತರೆ; ಹಣ, ಸಮಯ ಮತ್ತು ನೆಮ್ಮದಿ ಕಳೆದುಕೊಂಡು ಬದುಕು ಬರಿದು ಮಾಡಿಕೊಂಡರೆ; ನಿರುದ್ಯೋಗ, ಹಣದುಬ್ಬರ, ಬೆಲೆ ಏರಿಕೆಗಳನ್ನು ಪ್ರಶ್ನಿಸದಂತಾದರೆ; ಅದು ಆಳುವ ಸರ್ಕಾರಗಳಿಗೆ ಅನುಕೂಲಕರ ವಾತಾವರಣವನ್ನು ನಿರ್ಮಿಸುವುದಿಲ್ಲವೇ?

ದೇಶದಾದ್ಯಂತ ಐಪಿಎಲ್ ಟಿ20 ಕ್ರಿಕೆಟ್ ಪಂದ್ಯಗಳದ್ದೇ ಗದ್ದಲ. ಇದೇ ಸಂದರ್ಭದಲ್ಲಿ ಐದು ರಾಜ್ಯಗಳ ಹಣೆಬರಹ ಬದಲಿಸಬಲ್ಲ ವಿಧಾನಸಭಾ ಚುನಾವಣೆಗಳು ಜರುಗುತ್ತಿವೆ. ಒಂದು ಕ್ರಿಕೆಟ್, ಇನ್ನೊಂದು ಚುನಾವಣೆ- ಈ ದೇಶ ಎರಡನ್ನೂ ಜ್ವರದಂತೆ ಭಾವಿಸುತ್ತದೆ. ಎರಡೂ ಒಂದೇ ಸಮಯದಲ್ಲಿ ಬಾಧಿಸುವಂತೆ ಕೇಂದ್ರ ಚುನಾವಣಾ ಆಯೋಗ ಮತ್ತು ಬಿಸಿಸಿಐ ವ್ಯವಸ್ಥಿತವಾಗಿ ನೋಡಿಕೊಂಡಿವೆ.

ಆಯೋಗದಲ್ಲಿ ಗ್ಯಾನೇಶ್ ಕುಮಾರ್, ಕ್ರಿಕೆಟ್ ಬೋರ್ಡ್‌ನಲ್ಲಿ ಜಯ್ ಶಾ ಎಂಬ ಮುಖ್ಯಸ್ಥರಿದ್ದಾರೆ. ಚುನಾವಣಾ ಆಯೋಗ ಬಿಜೆಪಿಯ ಬಿಗಿಮುಷ್ಟಿಯಲ್ಲಿದ್ದು, ಚುನಾವಣೆಗಳನ್ನು ಗೆಲ್ಲಿಸಿಕೊಡುತ್ತಿದ್ದರೆ; ಕ್ರಿಕೆಟ್ ಬೋರ್ಡ್ ಐಪಿಎಲ್‌ನಂತಹ ಆಟದ ನೆಪದಲ್ಲಿ ಜೂಜಾಟ ನಡೆಸುತ್ತ ಕೋಟ್ಯಂತರ ರೂಪಾಯಿ ಲೂಟಿ ಮಾಡುತ್ತಿದೆ. ದೇಶ ಎದುರಿಸುತ್ತಿರುವ ಜ್ವಲಂತ ಸಮಸ್ಯೆಗಳನ್ನು ಮರೆಸುತ್ತಿದೆ, ಹಿನ್ನೆಲೆಗೆ ಸರಿಸುತ್ತಿದೆ.

ಇದರ ಪರಿವೆಯೇ ಇಲ್ಲದ ದೇಶದ ಯುವ ಜನತೆ- ಎರಡು ವರ್ಗವಾಗಿ ವಿಭಜನೆಗೊಂಡಿದೆ. ಒಂದು ವರ್ಗ ಅಪ್ಪಟ ಮನರಂಜನೆ ನೀಡುವ ಕ್ರಿಕೆಟ್ ಪಂದ್ಯಗಳನ್ನು ನೋಡುತ್ತ ಟ್ರೋಲಾಟದಲ್ಲಿ ಮುಳುಗಿದರೆ; ಮತ್ತೊಂದು ವರ್ಗ ಪ್ರತಿ ಬಾಲಿಗೂ ಬೆಟ್ಟಿಂಗ್ ಕಟ್ಟುತ್ತ ಜೂಜಾಟದಲ್ಲಿ ಬದುಕನ್ನು ಬರಿದಾಗಿಸಿಕೊಳ್ಳುತ್ತಿದೆ. ಇವರ ನಡುವೆ ಆಟಗಾರರು, ಸಿನಿಮಾ ನಟ-ನಟಿಯರು, ಪ್ರಾಯೋಜಕರು, ಜಾಹೀರಾತುದಾರರು, ಸುದ್ದಿ ಮಾಧ್ಯಮಗಳು, ಉದ್ಯಮಿಗಳು, ಸ್ಟೇಡಿಯಂ ಮಾಲೀಕರು ಮಹಾರಾಜರಂತೆ ಮೆರೆಯುತ್ತಿದ್ದಾರೆ.

ಒಂದು ವರ್ಗಕ್ಕೆ ಐಪಿಎಲ್ ಕ್ರಿಕೆಟ್ ಕ್ಷಣಕ್ಷಣಕ್ಕೂ ರೋಚಕತೆಯನ್ನು ಕಟ್ಟಿಕೊಡುವ, ಮನರಂಜನೆ ನೀಡುವ ಆಟ. ಈ ವರ್ಗದ ಕ್ರಿಕೆಟ್ ಅಭಿಮಾನಿಗಳು, ಸೋಷಿಯಲ್ ಮೀಡಿಯಾವನ್ನು ಯುದ್ಧಭೂಮಿ ಎಂದು ಭ್ರಮಿಸುತ್ತಾರೆ. ಟ್ರೋಲ್ ಮತ್ತು ಮೀಮ್ಸ್ ಗಳನ್ನು ಮಿಸ್ಸೈಲ್‌ಗಳಂತೆ ಬಳಸುತ್ತಾರೆ. ಲೈಕ್‌ಗಳಿಗೆ ಉಬ್ಬಿಹೋಗುತ್ತಾರೆ. ಕಮೆಂಟ್ಸ್ ಗಳಿಗೆ ಕಂಗಾಲಾಗುತ್ತಾರೆ. ತಮ್ಮೊಳಗಿನ ಆಸೆ-ಆಕಾಂಕ್ಷೆಗಳನ್ನು ಆಟಗಾರರ ಮೇಲೆ ಹೇರುತ್ತಾರೆ. ಗೆದ್ದರೆ ಪ್ರಪಂಚವನ್ನೇ ಗೆದ್ದಂತೆ ಕುಣಿದಾಡುತ್ತಾರೆ; ಸೋತರೆ ಎದುರಾಳಿ ತಂಡವನ್ನು ಟ್ರೋಲ್ ಮಾಡಿ ವಿಕೃತಿ ಮೆರೆಯುತ್ತಾರೆ. ಮನುಷ್ಯತ್ವವನ್ನೇ ಮರೆತು ಕಾದಾಟಕ್ಕಿಳಿಯುತ್ತಾರೆ. ಅದಕ್ಕೆ ಉತ್ತಮ ಉದಾಹರಣೆಯಾಗಿ ಮೊನ್ನೆ ಬೆಂಗಳೂರಿನಲ್ಲಿ ಆರ್‌ಸಿಬಿ ಮತ್ತು ಸಿಎಸ್‌ಕೆ ಪಂದ್ಯವನ್ನು ನೋಡಬಹುದಾಗಿದೆ. ಆ ಪಂದ್ಯದ ನಂತರ ನಡೆದ ಘಟನೆಗಳ ವಿಡಿಯೋಗಳೇ ಅಭಿಮಾನಿಗಳ ಅಸಹ್ಯವನ್ನು ಹೊರಹಾಕುತ್ತವೆ.

ಒಂದು ಪೋಸ್ಟ್/ಟ್ರೋಲ್ ಎಷ್ಟು ಜನ ನೋಡಿದರು, ಹೇಗೇಗೆಲ್ಲ ವೈರಲ್ ಆಯಿತು, ಎಷ್ಟು ಓಡಿತು ಎಂಬುದರ ಮೇಲೆ ಅವತ್ತಿನ ಅವರ ಬದುಕು ನಿಂತಿರುತ್ತದೆ. ಅದೇನೂ ನಿರಂತರವಲ್ಲ, ಅವರ ಅಬ್ಬರ, ಆರ್ಭಟ, ಕುಣಿದಾಟವೇ ಬದುಕಲ್ಲ. ಮೊಬೈಲ್‌ನಿಂದ ಬೆರಳು ತೆಗೆಯುತ್ತಿದ್ದಂತೆ, ಎಲ್ಲವೂ ತಣ್ಣಗಾಗಿರುತ್ತದೆ. ಅದು ಗೊತ್ತಿದ್ದರೂ, ಮತ್ತೊಂದು ಮ್ಯಾಚ್‌ಗಾಗಿ- ಹಣೆಯಲು, ಅಣಕಿಸಲು ಸಿದ್ಧರಾಗಿರುತ್ತಾರೆ. ಸೋಷಿಯಲ್ ಮೀಡಿಯಾ ಎನ್ನುವುದು ಹೊಸಗಾಲದ ಕಿಂದರಿಜೋಗಿ. ನಾವು ಆ ಕಿಂದರಿಜೋಗಿಯ ಹಿಂದೆ ಇಲಿಗಳಂತೆ ಓಡುತ್ತಿದ್ದೇವೆ ಎಲ್ಲಿಗೆ ಎನ್ನುವುದು ಗೊತ್ತಿಲ್ಲ!

ಮತ್ತೊಂದು ವರ್ಗ ಬೆಟ್ಟಿಂಗ್ ದಂಧೆಯಲ್ಲಿ ಮುಳುಗೇಳುತ್ತಿದೆ. ಜೂಜಾಟದ ಜಾಲದಲ್ಲಿ ಯುವಕರು, ಕಾಲೇಜು ವಿದ್ಯಾರ್ಥಿಗಳು, ನಿರುದ್ಯೋಗಿಗಳು, ಆರ್ಥಿಕವಾಗಿ ಹಿಂದುಳಿದವರು, ದಿನಗೂಲಿ ಕಾರ್ಮಿಕರು, ನಗರಗಳಲ್ಲಿ ಜೀವನೋಪಾಯಕ್ಕಾಗಿ ಕೆಲಸ ಮಾಡುತ್ತಿರುವವರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಈ ಜೂಜಾಟ ಮೊದಲು ನಗರ, ಪಟ್ಟಣಗಳಲ್ಲಿ ಮಾತ್ರವಿತ್ತು. ಈಗ ಪ್ರತಿಯೊಬ್ಬರ ಕೈಯಲ್ಲಿ ಮೊಬೈಲ್ ಇದ್ದು, ಹಳ್ಳಿಗಳಿಗೂ ಹಬ್ಬಿದೆ. ಪಂದ್ಯಗಳ ಸೋಲುಗೆಲುವು ಲೆಕ್ಕಾಚಾರದಲ್ಲಿ ನಡೆಯುತ್ತಿದ್ದ ಬೆಟ್ಟಿಂಗ್, ಈಗ ಟಾಸ್‌ನಿಂದ ಹಿಡಿದು ಕೊನೆಯ ಓವರ್‌ವರೆಗೆ; ಪ್ರತಿ ಬಾಲಿಗೆ, ಓವರ್ಗೆ, ವಿಕೆಟ್ ಪತನಕ್ಕೆ, ವೈಯಕ್ತಿಕ ಸ್ಕೋರ್ಗೆ, ಪವರ್ ಪ್ಲೇವರೆಗೂ ಹಣ ಕಟ್ಟಲಾಗುತ್ತದೆ. ಬೌಂಡರಿ ಬಾರಿಸಿದರೆ 10ಕ್ಕೆ 20. ಸಿಕ್ಸರ್ ಬಾರಿಸಿದರೆ 10ಕ್ಕೆ 40. ಒಬ್ಬೊಬ್ಬರದು ಒಂದೊಂದು ರೇಂಜ್.

ಪ್ರತಿ ಬಾರಿಯ ಐಪಿಎಲ್‌ನಲ್ಲೂ ಸಾವಿರಾರು ಕೋಟಿಗಳ ಅಕ್ರಮ ಬೆಟ್ಟಿಂಗ್ ವ್ಯವಹಾರ ಅವ್ಯಾಹತವಾಗಿ ನಡೆಯುತ್ತದೆ. ಸಣ್ಣದಾಗಿ ಶುರುವಾದ ಜೂಜಾಟ ಈಗ ಬೃಹತ್ ದಂಧೆಯಾಗಿ ಮಾರ್ಪಾಡಾಗಿದೆ. ಗಲ್ಲಿಯ ರೌಡಿಗಳಿಂದ ಹಿಡಿದು ಮಾಫಿಯಾ ಡಾನ್‌ಗಳವರೆಗೆ; ಪೇದೆಯಿಂದ ಹಿಡಿದು ಉನ್ನತ ಅಧಿಕಾರಿಗಳವರೆಗೆ; ದಿನಗೂಲಿ ಕಾರ್ಮಿಕನಿಂದ ಹಿಡಿದು ಐಎಎಸ್ ಅಧಿಕಾರಿಗಳವರೆಗೆ; ರಾಜಕೀಯ ಪುಢಾರಿಯಿಂದ ನಾಯಕರವರೆಗೆ ವಿಸ್ತರಣೆಯಾಗಿದೆ. ಇದಲ್ಲದೆ, ಬುಕ್ಕಿಗಳು ನಡೆಸುವ ಮ್ಯಾಚ್ ಫಿಕ್ಸಿಂಗ್, ಪ್ರತಿ ಪಂದ್ಯಕ್ಕೆ, ಪ್ರತಿ ಬಾಲಿಗೆ ವಿಶ್ವದಾದ್ಯಂತ ನಡೆಯುವ ಬೆಟ್ಟಿಂಗ್ ದಂಧೆಯ ಅಂದಾಜು ಹಣ ನಮ್ಮ ಊಹೆಗೂ ನಿಲುಕದ್ದಾಗಿದೆ. ಹಣ ಕಳೆದುಕೊಂಡ ಬಡವರು, ಮಧ್ಯಮವರ್ಗದವರು ಆತ್ಮಹತ್ಯೆಗಳಿಗೆ ತುತ್ತಾದರೆ, ಹಲವು ಕುಟುಂಬಗಳು ಮನೆ ಮಠ ಕಳೆದುಕೊಂಡು ಬೀದಿಗೆ ಬೀಳುತ್ತವೆ.

ಅಸ್ಸಾಂನಲ್ಲಿ ದ್ವೇಷದ ರಾಜಕಾರಣದ ನಡುವೆ ಸೌಹಾರ್ದದ ಗಾಳಿ: ಕಾಂಗ್ರೆಸ್ ಗೆಲ್ಲಿಸುವರೇ ಗೌರವ್?



ಸಾಮಾನ್ಯವಾಗಿ ಅಸ್ಸಾಂ ಚುನಾವಣೆಗಳು ಎಂದರೆ ಅಭ್ಯರ್ಥಿಗಳ ನಡುವಿನ ಕಠೋರ ವಾಗ್ದಾಳಿಗಳು, ನಿಂದನೆಗಳು ಹಾಗೂ ಬೆದರಿಕೆಗಳಿಗೆ ಹೆಸರಾಗಿರುತ್ತವೆ. ಆದರೆ, ಈ ಬಾರಿ ಕೆಲವು ಕ್ಷೇತ್ರಗಳು ಅಚ್ಚರಿ ಎಂಬಂತೆ ಅತ್ಯಂತ ಸೌಜನ್ಯಯುತ ಮತ್ತು ನಾಗರಿಕ ರಾಜಕಾರಣಕ್ಕೆ ಸಾಕ್ಷಿಯಾಗುತ್ತಿವೆ

2026ರ ಅಸ್ಸಾಂ ವಿಧಾನಸಭಾ ಚುನಾವಣೆಯು ದಿನದಿಂದ ದಿನಕ್ಕೆ ತೀವ್ರ ಕುತೂಹಲ ಕೆರಳಿಸುತ್ತಿದೆ. ಈ ಬಾರಿ ತೀವ್ರ ಪೈಪೋಟಿಯ ನಡುವೆ ಕಾಂಗ್ರೆಸ್ ಪಕ್ಷವನ್ನು ಮರಳಿ ಅಧಿಕಾರಕ್ಕೆ ತರುವ ಮಹತ್ತರ ಹಾಗೂ ಕಠಿಣ ಜವಾಬ್ದಾರಿ ಗೌರವ್ ಗೊಗೊಯ್ ಅವರ ಮೇಲಿದೆ. ಲೋಕಸಭೆಯಲ್ಲಿ ಕಾಂಗ್ರೆಸ್‌ನ ಉಪನಾಯಕರಾಗಿರುವ ಮತ್ತು ಇಡೀ ಈಶಾನ್ಯ ಭಾರತದಲ್ಲಿ ಪಕ್ಷದ ಪ್ರಬಲ ಮುಖವಾಗಿರುವ ಗೌರವ್, ಅಸ್ಸಾಂನಲ್ಲಿ ಮಂಕಾಗಿರುವ ಪಕ್ಷಕ್ಕೆ ಹೊಸ ಚೈತನ್ಯ ನೀಡುವರೇ ಎಂಬ ಪ್ರಶ್ನೆ ಎದುರಾಗಿದೆ.

2023ರ ಕ್ಷೇತ್ರ ವಿಂಗಡಣೆ ಪ್ರಕ್ರಿಯೆಯಲ್ಲಿ ಅವರು ಎರಡು ಬಾರಿ ಪ್ರತಿನಿಧಿಸಿದ್ದ ಕಲಿಯಾಬೋರ್ ಕ್ಷೇತ್ರವು ಅಸ್ತಿತ್ವ ಕಳೆದುಕೊಂಡಿದೆ. ಹೀಗಾಗಿ ಅವರು ಮಾಜಿ ಮುಖ್ಯಮಂತ್ರಿ ಹಾಗೂ ತಮ್ಮ ತಂದೆ ತರುಣ್ ಗೊಗೊಯ್ ಅವರು ಮೂರು ಬಾರಿ ಪ್ರತಿನಿಧಿಸಿದ್ದ ಜೋರ್ಹಾತ್ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದಾರೆ.

ಸಾಮಾನ್ಯವಾಗಿ ಅಸ್ಸಾಂ ಚುನಾವಣೆಗಳು ಎಂದರೆ ಅಭ್ಯರ್ಥಿಗಳ ನಡುವಿನ ಕಠೋರ ವಾಗ್ದಾಳಿಗಳು, ನಿಂದನೆಗಳು ಹಾಗೂ ಬೆದರಿಕೆಗಳಿಗೆ ಹೆಸರಾಗಿರುತ್ತವೆ. ಆದರೆ, ಈ ಬಾರಿ ಕೆಲವು ಕ್ಷೇತ್ರಗಳು ಅಚ್ಚರಿ ಎಂಬಂತೆ ಅತ್ಯಂತ ಸೌಜನ್ಯಯುತ ಮತ್ತು ನಾಗರಿಕ ರಾಜಕಾರಣಕ್ಕೆ ಸಾಕ್ಷಿಯಾಗುತ್ತಿವೆ. ವಿಶೇಷವಾಗಿ ಅಸ್ಸಾಂನ ಚಹಾ ರಾಜಧಾನಿ ಮತ್ತು ಸಾಹಿತ್ಯ-ಬೌದ್ಧಿಕ ದಿಗ್ಗಜರ ತವರೂರಾದ ಜೋರ್ಹಾತ್, ದಿಸ್ಪುರ್, ನ್ಯೂ ಗುವಾಹಟಿ ಮತ್ತು ವಾಯುವ್ಯ ಅಸ್ಸಾಂನ ತಮುಲ್ಪುರ್ ಕ್ಷೇತ್ರಗಳು ಈ ಉತ್ತಮ ಬೆಳವಣಿಗೆಗೆ ಉದಾಹರಣೆಯಾಗಿವೆ. ಅತ್ಯಧಿಕ ಸಾಕ್ಷರತೆ ಹೊಂದಿರುವ ಜೋರ್ಹಾತ್ ಭಾಗದ ಜನತೆ ಆಕ್ರಮಣಕಾರಿ ಹಾಗೂ ಕೆಟ್ಟ ಭಾಷೆಯನ್ನು ಸಹಿಸುವುದಿಲ್ಲ, ಇದು ಅವರು ಆಯ್ಕೆ ಮಾಡುವ ನಾಯಕರ ಮೇಲೂ ಪ್ರಭಾವ ಬೀರಿದೆ ಎಂದು ಸ್ಥಳೀಯ ಪರಿಸರ ಕಾರ್ಯಕರ್ತ ಬಿಜು ಶರ್ಮಾ ಅಭಿಪ್ರಾಯಪಡುತ್ತಾರೆ. ಕಿರಿಯ ಅಭ್ಯರ್ಥಿಗಳು ಹಿರಿಯರ ಕಾಲು ಮುಟ್ಟಿ ನಮಸ್ಕರಿಸುವುದು, ಪರಸ್ಪರರ ಭಾಷಣ ಕೌಶಲ್ಯ ಹೊಗಳುವುದು ಮತ್ತು ಮುಖಾಮುಖಿಯಾದಾಗ ಹಸ್ತಲಾಘವ ಮಾಡಿ ಆಲಂಗಿಸುವುದು ಇಲ್ಲಿ ಸಾಮಾನ್ಯವಾಗಿದೆ.

ಸೌಜನ್ಯದ ರಾಜಕಾರಣಕ್ಕೆ ಜೋರ್ಹಾತ್ ಕಣವೇ ಅತ್ಯುತ್ತಮ ನಿದರ್ಶನವಾಗಿದೆ. ಇಲ್ಲಿ 67 ವರ್ಷದ ಹಿರಿಯ ಬಿಜೆಪಿ ನಾಯಕ ಹಿತೇಂದ್ರ ನಾಥ್ ಗೋಸ್ವಾಮಿ ಮರು ಆಯ್ಕೆ ಬಯಸಿ ಕಣಕ್ಕಿಳಿದಿದ್ದಾರೆ. ವಿಜ್ಞಾನದಲ್ಲಿ ಸ್ನಾತಕೋತ್ತರ ಮತ್ತು ಕಾನೂನು ಪದವೀಧರರಾಗಿರುವ ಅವರು, ತಮ್ಮ ಎದುರಾಳಿಯಾಗಿರುವ ನ್ಯೂಯಾರ್ಕ್ ವಿವಿಯಲ್ಲಿ ಸಾರ್ವಜನಿಕ ಆಡಳಿತದಲ್ಲಿ ಸ್ನಾತಕೋತ್ತರ ಪದವಿ ಪಡೆದ 43 ವರ್ಷದ ಗೌರವ್ ಗೊಗೊಯ್ ಅವರ ಭಾಷಣ ಕೌಶಲ್ಯವನ್ನು ಮುಕ್ತವಾಗಿ ಶ್ಲಾಘಿಸಿದ್ದಾರೆ. ''ನನ್ನ ಕಿರಿಯ ಎದುರಾಳಿ ಅತ್ಯಂತ ಸೊಗಸಾಗಿ ಮಾತನಾಡುತ್ತಾರೆ, ಆದರೆ ಅದರಿಂದಲೇ ಅವರ ಗೆಲುವು ಖಚಿತ ಎಂದು ಹೇಳಲಾಗುವುದಿಲ್ಲ, ರಾಜಕೀಯ ಟೀಕೆಗಳು ಅಗೌರವದಿಂದ ಕೂಡಿರಬೇಕಿಲ್ಲ'' ಎಂದಿದ್ದಾರೆ ಗೋಸ್ವಾಮಿ. ಇದಕ್ಕೆ ಅತ್ಯಂತ ವಿನಮ್ರವಾಗಿ ಪ್ರತಿಕ್ರಿಯಿಸಿರುವ ಗೌರವ್, ಹಿರಿಯ ಎದುರಾಳಿಗೆ ಶುಭಕೋರಿ, ''ಜೋರ್ಹಾತ್ ಜನತೆ ಬದಲಾವಣೆಗಾಗಿ ಹಾತೊರೆಯುತ್ತಿದ್ದಾರೆ'' ಎಂದು ತಮ್ಮ ಗೆಲುವಿನ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಇಂತಹದ್ದೇ ಸೌಹಾರ್ದಯುತ ವಾತಾವರಣ ಇತರ ಕಡೆಗಳಲ್ಲೂ ಕಂಡುಬರುತ್ತಿದೆ. ಜೋರ್ಹಾತ್‌ನಿಂದ 300 ಕಿ.ಮೀಗೂ ಹೆಚ್ಚು ಪಶ್ಚಿಮಕ್ಕಿರುವ ಗುವಾಹಟಿಯ ದಿಸ್ಪುರ್ ಕ್ಷೇತ್ರದಲ್ಲಿ 57 ವರ್ಷದ ಪಕ್ಷೇತರ ಅಭ್ಯರ್ಥಿ ಜಯಂತ ಕುಮಾರ್ ದಾಸ್, ತಮ್ಮ ಮಾಜಿ ಪಕ್ಷ ಬಿಜೆಪಿಯ ಮೇಲೆ ಅಸಮಾಧಾನ ಹೊಂದಿದ್ದರೂ, ಎದುರಾಳಿ 65 ವರ್ಷದ ಮಾಜಿ ಕಾಂಗ್ರೆಸ್ ಸಂಸದ ಪ್ರದ್ಯುತ್ ಬೊರ್ಡೊಲೊಯ್ ಅವರನ್ನು ಜಂಟಲ್ ಮ್ಯಾನ್ ಎಂದು ಗೌರವಿಸಿದ್ದಾರೆ. ಇಲ್ಲಿ ಕಾಂಗ್ರೆಸ್‌ನ ಮೀರಾ ಬೋರ್ತಕೂರ್ ಗೋಸ್ವಾಮಿ ಅವರೊಂದಿಗೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿದೆ. ನ್ಯೂ ಗುವಾಹಟಿಯಲ್ಲಿ ಕಾಂಗ್ರೆಸ್‌ನ ಶಂತನು ಬೋರಾ ಮತ್ತು ಬಿಜೆಪಿಯ ದಿಪ್ಲು ರಂಜನ್ ಶರ್ಮಾ ಫಲಿತಾಂಶ ಏನೇ ಇದ್ದರೂ ಕ್ಷೇತ್ರದ ಅಭಿವೃದ್ಧಿಗೆ ಒಟ್ಟಾಗಿ ದುಡಿಯುವುದಾಗಿ ಹೇಳಿದ್ದಾರೆ. ಬೋಡೋಲ್ಯಾಂಡ್ ಟೆರಿಟೋರಿಯಲ್ ಕೌನ್ಸಿಲ್‌ನ 15 ಕ್ಷೇತ್ರಗಳಲ್ಲೊಂದಾದ ತಮುಲ್ಪುರ್‌ನಲ್ಲಿ ಅಸೆಂಬ್ಲಿ ಸ್ಪೀಕರ್, ಬಿಜೆಪಿಯ ಬಿಸ್ವಜಿತ್ ಡೈಮರಿ ಮತ್ತು ಯುಪಿಪಿಎಲ್ ಅಧ್ಯಕ್ಷ ಹಾಗೂ ರಾಜ್ಯಸಭಾ ಚುನಾಯಿತ ಸದಸ್ಯ ಪ್ರಮೋದ್ ಬೊರೊ ವೈಯಕ್ತಿಕ ದಾಳಿ ಬಿಟ್ಟು ಅಭಿವೃದ್ಧಿಯತ್ತ ಮಾತ್ರ ಗಮನಹರಿಸಿದ್ದಾರೆ.

ಈ ಸ್ಥಳೀಯ ಸಕಾರಾತ್ಮಕ ಬೆಳವಣಿಗೆಗಳ ನಡುವೆ, ಇಡೀ ರಾಜ್ಯದ ಚುನಾವಣೆಯ ಹೊಣೆ ಗೌರವ್ ಗೊಗೊಯ್ ಹೆಗಲ ಮೇಲಿದೆ. ಈ ಸಂದರ್ಭದಲ್ಲಿ ದೆಹಲಿ, ಪಂಜಾಬ್ ಮತ್ತು ಕೇರಳದ ಉದಾಹರಣೆ ನೀಡಿರುವ ಗೌರವ್, ''ನಾವು ಒಂದೆಡೆ ಮಿತ್ರರಾಗಿದ್ದು, ಮತ್ತೊಂದೆಡೆ ವಿರೋಧಿಗಳಾಗಿರಬಹುದು ಎಂಬುದನ್ನು ಜನ ಅರ್ಥಮಾಡಿಕೊಂಡಿದ್ದಾರೆ'' ಎನ್ನುತ್ತಾರೆ. ಹಾಗೆಯೇ ಪಂಜಾಬ್‌ನ ಅಕಾಲಿದಳ ಹಾಗೂ ತಮಿಳುನಾಡಿನ ಎಐಎಡಿಎಂಕೆ ಉದಾಹರಣೆ ನೀಡಿ, ಮೈತ್ರಿ ಪಕ್ಷಗಳ ವಿಚಾರದಲ್ಲಿ ಬಿಜೆಪಿ ಬಳಸಿ ಬಿಸಾಡುವ ನೀತಿ ಅನುಸರಿಸುತ್ತಿದೆ ಎಂದು ಎದುರಾಳಿಗಳ ವಿರುದ್ಧ ವಾಗ್ದಾಳಿ ನಡೆಸುತ್ತಾರೆ.

ಬಿಜೆಪಿಯ ರಾಜಕೀಯ ಶೈಲಿಯನ್ನು ತೀವ್ರವಾಗಿ ಖಂಡಿಸಿರುವ ಗೌರವ್ ಗೊಗೊಯ್, ''ಬಿಜೆಪಿಯು ಕೇವಲ ರಾಜಕಾರಣಿಗಳನ್ನು ಮಾತ್ರವಲ್ಲ, ಕಾರ್ಪೊರೇಟ್ ವಲಯದಿಂದ ಹಿಡಿದು ಸಾಮಾನ್ಯ ಜನರವರೆಗೂ ಪ್ರತಿಯೊಬ್ಬರನ್ನೂ ವಿವಿಧ ಯೋಜನೆಗಳ ಷರತ್ತುಗಳ ಮೂಲಕ ನಿಯಂತ್ರಿಸುತ್ತಿದೆ. ಭಾರತದಲ್ಲಿ ರಷ್ಯಾದ ಮಾದರಿಯ ಆಲಿಗಾರ್ಕಿ (ಕೆಲವೇ ಶ್ರೀಮಂತರ ದಬ್ಬಾಳಿಕೆಯ ಆಡಳಿತ) ವ್ಯವಸ್ಥೆಯನ್ನು ಜಾರಿಗೆ ತರಲು ಬಿಜೆಪಿ ಪ್ರಯತ್ನಿಸುತ್ತಿದೆ. ಆದರೆ ಕಾಂಗ್ರೆಸ್ ಮಾತ್ರ ಸಂವಿಧಾನದಲ್ಲಿ ಅಳವಡಿಸಲಾದ ಪ್ರಜಾಸತ್ತಾತ್ಮಕ ಮೌಲ್ಯಗಳಿಗೆ ಕಟ್ಟುಬಿದ್ದಿದೆ. ಸಂಸ್ಥೆಗಳ ಸ್ವಾಯತ್ತತೆ ಮತ್ತು ದೇಶದ ನಾಗರಿಕರ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ರಕ್ಷಿಸುವ ಭರವಸೆಯನ್ನು ಜನರಿಗೆ ನೀಡುವ ಮೂಲಕ ಕಾಂಗ್ರೆಸ್ ಮತ್ತೆ ಎಲ್ಲರ ವಿಶ್ವಾಸ ಗಳಿಸಲಿದೆ'' ಎನ್ನುತ್ತಾರೆ.

''ರಾಹುಲ್ ಗಾಂಧಿಯವರ ಭಾರತ್ ಜೋಡೋ ಯಾತ್ರೆಯು ಯಾವುದೇ ಆಕರ್ಷಕ ಘೋಷಣೆಗಳಿಲ್ಲದೆ, ಸಮುದಾಯಗಳನ್ನು ಒಗ್ಗೂಡಿಸುವ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುವ ಕಾಂಗ್ರೆಸ್‌ನ ಬದ್ಧತೆಯನ್ನು ನಿರೂಪಿಸಿದೆ. ನಮಗೆ ಕೇವಲ ಚುನಾವಣೆಗಾಗಿ ಮಾತ್ರವಲ್ಲ, ಎಲ್ಲ ಸಮಯದಲ್ಲೂ ಎಲ್ಲಾ ಸಮುದಾಯಗಳು ಮುಖ್ಯವಾಗಿವೆ. ಆದರೆ ಚುನಾವಣೆಯಲ್ಲಿ ಗೆಲ್ಲಲು ನಿರ್ದಿಷ್ಟ ಗುರಿ ನಿಗದಿಪಡಿಸುವುದು, ಯಾವುದೇ ಬೆಲೆ ತೆತ್ತಾದರೂ ಗೆಲ್ಲಲೇಬೇಕು ಎನ್ನುವ ಬಿಜೆಪಿಯ ತಂತ್ರ, ಯಾವುದೇ ಕಾರಣಕ್ಕೂ ಫಲಕೊಡುವುದಿಲ್ಲ'' ಎಂದು ಕೇಸರಿ ಪಕ್ಷದ ದುರುದ್ದೇಶವನ್ನು ಗೌರವ್ ಟೀಕಿಸುತ್ತಾರೆ.

ಅಸ್ಸಾಂನ ಪ್ರಮುಖ ವೋಟ್ ಬ್ಯಾಂಕ್ ಆಗಿರುವ ಆದಿವಾಸಿಗಳು ಮತ್ತು ಚಹಾ ತೋಟದ ಕಾರ್ಮಿಕರತ್ತ ಗೌರವ್ ವಿಶೇಷ ಗಮನಹರಿಸಿದ್ದಾರೆ. ''ಈ ಸಮುದಾಯಗಳು ಬಿಜೆಪಿಯತ್ತ ವಾಲುತ್ತಿವೆ ಎಂಬ ತಪ್ಪು ಗ್ರಹಿಕೆಯಿದೆ. ಆದರೆ, ಉದ್ಯಮದಲ್ಲಿನ ಬಿಕ್ಕಟ್ಟು ಮತ್ತು ಉದ್ಯೋಗಾವಕಾಶಗಳ ಕೊರತೆಯಿಂದಾಗಿ ಯುವಜನತೆ ತೀವ್ರ ಹತಾಶರಾಗಿದ್ದಾರೆ. ಅಷ್ಟೇ ಅಲ್ಲದೆ, ಬಿಜೆಪಿಯು ತನ್ನ ಸಾಂಸ್ಕೃತಿಕ ಮತ್ತು ಧಾರ್ಮಿಕ ಮೌಲ್ಯಗಳನ್ನು ಬಲವಂತವಾಗಿ ಹೇರುವ ಮೂಲಕ ಆದಿವಾಸಿಗಳ ವಿಶಿಷ್ಟ ವೈವಿಧ್ಯತೆಗೆ ಧಕ್ಕೆ ತರುತ್ತಿದೆ. ಸಂಪನ್ಮೂಲಗಳ ಸಮಾನ ವಿತರಣೆಗಾಗಿ ರಾಹುಲ್ ಗಾಂಧಿಯವರು ನೀಡಿರುವ ಜಾತಿ ಗಣತಿಯ ಭರವಸೆಯು ಈ ಸಮುದಾಯದಲ್ಲಿ ಆಶಾಕಿರಣ ಮೂಡಿಸಿದ್ದು, ಇವರೆಲ್ಲರೂ ಕಾಂಗ್ರೆಸ್ ಕೈಹಿಡಿಯಲಿದ್ದಾರೆ'' ಎಂದು ಭರವಸೆ ವ್ಯಕ್ತಪಡಿಸುತ್ತಾರೆ.

ಈ ಸೌಜನ್ಯದ ರಾಜಕಾರಣ ಹಾಗೂ ಗೌರವ್ ಗೊಗೊಯ್ ಅವರ ಪ್ರಬುದ್ಧ ಮತ್ತು ಸ್ಪಷ್ಟ ಸೈದ್ಧಾಂತಿಕ ನಿಲುವುಗಳು, 2026ರ ಅಸ್ಸಾಂ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಮರುಜೀವ ನೀಡಿ, ಏಕಾಂಗಿಯಾಗಿ ಪಕ್ಷವನ್ನು ದಡ ಸೇರಿಸುವ ಗುರಿ ತಲುಪಲು ಯಶಸ್ವಿಯಾಗಲಿದೆಯೇ ಎಂಬುದು ಮೇ 4ರಂದ ಪ್ರಕಟವಾಗುವ ಫಲಿತಾಂಶದಲ್ಲಿ ತಿಳಿಯಲಿದೆ.

ರಾಜಕೀಯಕ್ಕಾಗಿ ಅಕ್ರಮ ನುಸುಳುಕೋರರಿಗೆ ದೀದಿ ನೆರವು ; ಸಂಜಯ್‌ಕುಮಾರ್ ಆರೋಪ

ಹೈದರಾಬಾದ್, ಏ. 7

ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್ ಅವರು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಮತಬ್ಯಾಂಕ್ ರಾಜಕೀಯಕ್ಕಾಗಿ ಅಕ್ರಮ ಒಳನುಸುಳುವಿಕೆಗೆ ನೆರವು ನೀಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಹೈದರಾಬಾದ್‌ನಲ್ಲಿ ವಾಸಿಸುವ ಬಂಗಾಳಿ ಕುಟುಂಬಗಳನ್ನು ಭೇಟಿಯಾದ ಸಂಜಯ್ ಕುಮಾರ್ ಅವರು ಪಶ್ಚಿಮ ಬಂಗಾಳದಲ್ಲಿರುವ ತಮ್ಮ ಸಂಬಂಧಿಕರು ಮತ್ತು ಸ್ನೇಹಿತರನ್ನು ಸಂಪರ್ಕಿಸಿ ಬಿಜೆಪಿ ಕಡೆಗೆ ಬದಲಾಗುವಂತೆ ಪ್ರತಿಪಾದಿಸುವಂತೆ ಒತ್ತಾಯಿಸಿದರು.

ಕೇಂದ್ರ ಸರ್ಕಾರದ ಗಡಿ ಬೇಲಿ ಹಾಕುವ ಪ್ರಯತ್ನಗಳಿಗೆ ಸಹ ಅಡ್ಡಿಯಾಗುತ್ತಿದೆ, ಆದರೆ ಮಮತಾ ಬ್ಯಾನರ್ಜಿ ಮತಬ್ಯಾಂಕ್ ರಾಜಕೀಯಕ್ಕಾಗಿ ಒಳನುಸುಳುವಿಕೆಯನ್ನು ಪ್ರೋತ್ಸಾಹಿಸುತ್ತಲೇ ಇದ್ದಾರೆ ಎಂದು ಅವರು ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಬಾಂಗ್ಲಾದೇಶಿ ಒಳನುಸುಳುವಿಕೆಯನ್ನು ರಾಷ್ಟ್ರೀಯ ಭದ್ರತೆಗೆ ಗಂಭೀರ ಬೆದರಿಕೆ ಎಂದು ಅವರು ಬಣ್ಣಿಸಿದ್ದಾರೆ.ಅವರ ಪ್ರಕಾರ, ಸುಮಾರು 60,000 ಬಂಗಾಳಿಗಳು ಹೈದರಾಬಾದ್‌ನಲ್ಲಿ ವಾಸಿಸುತ್ತಿದ್ದಾರೆ ಮತ್ತು ಅನೇಕ ಬಂಗಾಳಿ ಕುಟುಂಬಗಳು ಬಂಗಾಳವನ್ನು ತೊರೆದು ತೆಲಂಗಾಣದಲ್ಲಿ ನೆಲೆಸಿದ್ದಾರೆ, ಏಕೆಂದರೆ ಅಲ್ಲಿನ ಪರಿಸ್ಥಿತಿ ಹದಗೆಡುತ್ತಿದೆ.ಬಂಗಾಳಕ್ಕೆ ಇಂದು ಭದ್ರತೆ, ಸ್ಥಿರತೆ ಮತ್ತು ಬಲವಾದ ಆಡಳಿತದ ಅಗತ್ಯವಿದೆ ಎಂದು ಸಂಜಯ್ ಕುಮಾರ್ ಹೇಳಿದರು.

2014 ರ ಮೊದಲು, ಯುಪಿಎ ಆಡಳಿತದ ಸಮಯದಲ್ಲಿ, ಬಾಂಗ್ಲಾದೇಶ ಮತ್ತು ಇತರ ದೇಶಗಳಿಂದ ಸಾವಿರಾರು ಅಕ್ರಮ ಒಳನುಸುಳುವವರು ಹೈದರಾಬಾದ್‌ಗೆ ಪ್ರವೇಶಿಸಿದರು ಎಂದು ಅವರು ಹೇಳಿಕೊಂಡರು.

ಕಾಂಗ್ರೆಸ್ ಮತ್ತು ಬಿಆರ್‌ಎಸ್ ಸರ್ಕಾರಗಳು ರೋಹಿಂಗ್ಯಾಗಳು ಮತ್ತು ನುಸುಳುಕೋರರಿಗೆ ಪಡಿತರ ಚೀಟಿಗಳು ಮತ್ತು ಮತದಾರರ ಚೀಟಿಗಳನ್ನು ನೀಡುವ ಮೂಲಕ ಅವರಿಗೆ ರೆಡ್ ಕಾರ್ಪೆಟ್ ಹಾಸಿದವು ಎಂದು ಅವರು ಹೇಳಿದರು.



ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ವಿಶ್ವಸಂಸ್ಥೆ ಮುಖ್ಯಸ್ಥರಾಗಿ ಮೊದಲ ಬಾರಿಗೆ ಮಹಿಳೆ ಆಯ್ಕೆ ಸಾಧ್ಯತೆ..?

ವಿಶ್ವಸಂಸ್ಥೆ,ಏ.7-ಎಂಬತ್ತು ವರ್ಷಗಳ ಇತಿಹಾಸ ಹೊಂದಿರುವ ವಿಶ್ವ ಸಂಸ್ಥೆಗೆ ಪ್ರಥಮ ಮಹಿಳಾ ಮಹಾಕಾರ್ಯದರ್ಶಿಯನ್ನು ಚುನಾಯಿಸಬೇಕೆಂಬ ಕೂಗಿನ ನಡುವೆ ಇಬ್ಬರು ಮಹಿಳಾ ಧುರೀಣರು ವಿಶ್ವ ಸಂಸ್ಥೆಯ ಮಹಾಕಾರ್ಯದರ್ಶಿ ಸ್ಥಾನದ ಚುನಾವಣಾ ಕಣದಲ್ಲಿದ್ದಾರೆ.



ವಿಶ್ವಸಂಸ್ಥೆಯ ಮುಂದಿನ ಮಹಾ ಕಾರ್ಯದರ್ಶಿಯ ಆಯ್ಕೆ ಪ್ರಕ್ರಿಯೆ ಈ ತಿಂಗಳು ಚಾಲನೆ ಗೊಂಡಿದ್ದು ನಾಲ್ವರು ನಾಮ ನಿರ್ದೇಶಿತ ಅಭ್ಯರ್ಥಿಗಳು ವಿಶ್ವ ಸಂಸ್ಥೆಯ ಕೇಂದ್ರ ಕಚೇರಿಯಲ್ಲಿ ಏ.21 ಮತ್ತು 22 ರಂದು ನಡೆಯಲಿರುವ ಸಂವಾದ ಮಾತುಕತೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

ಪೋರ್ಚುಗಲ್‌ನ ಮಾಜಿ ಪ್ರಧಾನಿ ಮತ್ತು ವಿಶ್ವಸಂಸ್ಥೆಯ ನಿರಾಶ್ರಿತರ ವಿಭಾಗದ ಮಾಜಿ ಹೈಕಮೀಷನರ್ ಸಹ ಆಗಿರುವ ವಿಶ್ವಸಂಸ್ಥೆಯ ಪ್ರಸ್ತುತ ಮುಖ್ಯಸ್ಥ ಆಂಟೋನಿಯೋ ಗುಟೆರ್ರೆಸ್ ಅವರು 2026 ರ ಡಿಸೆಂಬರ್‌ನಲ್ಲಿ ತಮ ಐದು ವರ್ಷಗಳ ಎರಡನೇ ಅಧಿಕಾರಾವಧಿಯನ್ನು ಪೂರ್ಣಗೊಳಿಸಲಿದ್ದಾರೆ.

2017ರಲ್ಲಿ ವಿಶ್ವಸಂಸ್ಥೆಯ 9ನೇ ಮಹಾಕಾರ್ಯದರ್ಶಿಯಾಗಿ ಗುಟೆರ್ರೆಸ್ ಅಧಿಕಾರ ವಹಿಸಿಕೊಂಡಿದ್ದರು. ವಿಶ್ವಸಂಸ್ಥೆ ಅಸ್ತಿತ್ವಕ್ಕೆ ಬಂದು 80 ವರ್ಷಗಳಾಗಿದ್ದರೂ ಇಲ್ಲಿಯ ತನಕ ಅದು ಮಹಿಳೆಯ ನೇತೃತ್ವ ಪಡೆದಿಲ್ಲ.

ವಿಶ್ವಸಂಸ್ಥೆಯ ಮಹಾಕಾರ್ಯದರ್ಶಿ ಸ್ಥಾನಕ್ಕೆ ಚಿಲಿಯ ಮಾಜಿ ಅಧ್ಯಕ್ಷೆ ಮತ್ತು ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಹೈಕಮಿಷನರ್ ಮಿಚೆಲ್ಲೆ ಬಾಚೆಲೆಟ್, ವಿಶ್ವಸಂಸ್ಥೆ ವ್ಯಾಪಾರ ಮತ್ತು ಅಭಿವೃದ್ಧಿ ಸಮ್ಮೇಳನ (ಯುಎನ್‌ಸಿಟಿಎಡಿ) ದ ಪ್ರಧಾನ ಕಾರ್ಯದರ್ಶಿ ಮತ್ತು ಕೋಸ್ಟಾರಿಕಾದ ಮಾಜಿ ಉಪಾಧ್ಯಕ್ಷೆ ರೆಬೆಕಾ ಗ್ರಿನ್ಸ್ ಪ್ಯಾನ್, ಅಂತರಾಷ್ಟ್ರೀಯ ಅಣು ಇಂಧನ ಸಂಸ್ಥೆಯ ಮುಖ್ಯಸ್ಥ ರಾಫೆಲ್ ಗ್ರಾಸ್ಸಿ ಮತ್ತು ಸೆನೆಗಲ್‌ನ ಮಾಜಿ ಅಧ್ಯಕ್ಷ ಮ್ಯಾಕಿ ಸಾಲ್ ಅವರು ಸ್ಪರ್ಧಿಸುತ್ತಿದ್ದಾರೆ.

ಬಾಚೆಲೆಟ್ ಅವರು ಬ್ರೆಜಿಲ್ ಮತ್ತು ಮೆಕ್ಸಿಕೋದಿಂದ, ಗ್ರಿನ್ಸ್ ಪ್ಯಾನ್ ಕೋಸ್ಟಾರಿಕಾದಿಂದ, ಗ್ರಾಸ್ಸಿ ಅರ್ಜೆಂಟೀನಾದಿಂದ ಮತ್ತು ಸಾಲ್ ಬುರುಂಡಿ ದೇಶಗಳಿಂದ ನಾಮ ನಿರ್ದೇಶನಗೊಂಡಿದ್ದಾರೆ.

ಏ.21 ಮತ್ತು 22 ರಂದು ಪ್ರತಿಯೊಬ್ಬ ಅಭ್ಯರ್ಥಿಗೆ ಮೂರು ಗಂಟೆಗಳ ಸಂವಾದ ಮಾತುಕತೆ ಕಾರ್ಯಕ್ರಮ ನಡೆಯಲಿದೆ ಎಂದು ವಿಶ್ವಸಂಸ್ಥೆ ಜನರಲ್ ಅಸೆಂಬ್ಲಿಯ ಅಧ್ಯಕ್ಷರ ಕಚೇರಿಯ ಅಧಿಕಾರಿ ಅನ್ನಾಲೆನಾ ಬೇರ್‌ಬಾಕ್ ಅವರು ತಿಳಿಸಿದರು.

ವಿಶ್ವಸಂಸ್ಥೆಯ ಮಹಾಕಾರ್ಯದರ್ಶಿಯನ್ನು 193 ಸದಸ್ಯರ ಜನರಲ್ ಅಸೆಂಬ್ಲಿಯು 15 ರಾಷ್ಟ್ರಗಳ ಸದಸ್ಯರಿರುವ ಭದ್ರತಾ ಮಂಡಳಿಯ ಶಿಫಾರಸಿನ ಮೇರೆಗೆ ನೇಮಕ ಮಾಡುತ್ತದೆ. ಭದ್ರತಾ ಮಂಡಳಿಯಲ್ಲಿ ಚೀನಾ, ಫ್ರಾನ್ಸ್ ,ರಷ್ಯಾ, ಬ್ರಿಟನ್ ಮತ್ತು ಅಮೆರಿಕ ಖಾಯಂ ಪ್ರತಿನಿಧಿಗಳಾಗಿದ್ದು, ವಿಟೋ ಅಧಿಕಾರ ಹೊಂದಿರುವ ರಾಷ್ಟ್ರಗಳಾಗಿವೆ.

ಬಾಬು ಜಗಜೀವನ ರಾಮ ಸಮ ಸಮಾಜ ನಿರ್ಮಾಣದ ಹರಿಕಾರ:ಸಂತೋಷ ಬಂಡೆ



ವಿಜಯಪುರ,ಏ.6-

ಹಸಿವು ಮುಕ್ತ ಭಾರತಕ್ಕೆ ಶ್ರಮಿಸಿದ ಬಾಬುಜಿ ಅವರು ಹಸಿರು ಕ್ರಾಂತಿಗೆ ಅಡಿಪಾಯ ಹಾಕಿ, ಸರ್ವ ಜನಾಂಗದ ಕಲ್ಯಾಣಕ್ಕೆ ಶ್ರಮಿಸಿ, ಸಮ ಸಮಾಜ ನಿರ್ಮಾಣಕ್ಕೆ ಬದುಕಿನುದ್ದಕ್ಕೂ ಹೋರಾಡಿದ್ದರು. ಅವರ ಚಿಂತನೆಗಳನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ರವಿವಾರ ಬಾಬು ಜಗಜೀವನ ರಾಮ ಅವರ 119 ನೇ ಜಯಂತಿ ನಿಮಿತ್ತ ಹಮ್ಮಿಕೊಂಡ ಸಮತಾ ದಿವಸಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಧಿಕಾರ ಮತ್ತು ಆಸ್ತಿಯಿಂದ ಗಳಿಸಲಾಗದ ಕೀರ್ತಿಯನ್ನು ಸೇವೆ ಹಾಗೂ ತ್ಯಾಗದಿಂದ ಗಳಿಸಬಹುದೆಂದು ಬಾಬು ಜಗಜೀವನರಾಮ್ ರ?ಬದುಕು ತಿಳಿಸಿ ಕೊಡುತ್ತದೆ.

ಅವರು ಹಾಕಿಕೊಟ್ಟ ಮಾರ್ಗದ'ಲ್ಲಿ ನಾವೆಲ್ಲರೂ ಸಾಗೋಣ ಎಂದು ಅಭಿಪ್ರಾಯಪಟ್ಟರು.

ಅವರು ನಿಸ್ವಾರ್ಥ ಸೇವೆ, ಸ್ವಾತಂತ್ರ್ಯ ಚಳವಳಿ, ಸಮರ್ಪಣಾ ಮನೋಭಾವದ ಹೋರಾಟ ದಿಂದ?ಸಮಾಜಕ್ಕೆ ಆದರ್ಶಪ್ರಾಯರಾಗಿದ್ದಾರೆ. ಸಾರಿಗೆ, ಆಹಾರ, ರೈಲ್ವೆ, ಕೃಷಿ ಮತ್ತು ಸಮುದಾಯ ಅಭಿವೃದ್ಧಿ, ಕಾರ್ಮಿಕ -ಉದ್ಯೋಗ ಪುನರ್ವಸತಿ ಕೆಲಸ ವನ್ನು ಮಾಡಿದ ಹಿರಿಮೆ ಅವರದು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಶಂಕರ ಹುಣಶ್ಯಾಳ ಮಾತನಾಡಿ, ಜಗಜೀವನರಾಮ್ ಜೀವನದಲ್ಲಿ ತುಂಬಾ ಕಷ್ಟಪಟ್ಟು ಮೇಲೆ ಬಂದವರು. ಬಡತನವಿದ್ದರೂ ವಿದ್ಯಾಭ್ಯಾಸ ಅರ್ಧಕ್ಕೆ ನಿಲ್ಲಿಸದೆ ಸುಶಿಕ್ಷಿತರಾದರು. ಇಂದಿನ ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡಬೇಕು. ಶಿಕ್ಷಣದಷ್ಟು ಒಳ್ಳೆಯ ಮದ್ದು ಬೇರೊಂದಿಲ್ಲ, ಶೈಕ್ಷಣಿಕವಾಗಿ ಮುಂದೆ ಬನ್ನಿ ಎಂದು ತಿಳಿಸಿದರು.

ಸಂಸ್ಥೆಯ ಕಾರ್ಯದರ್ಶಿ ಸುನಂದಾ ಹುಣಶ್ಯಾಳ, ಶಿಕ್ಷಕರಾದ ಲಕ್ಷ್ಮೀಕಾಂತ ವಡ್ಡರ, ರೇಣುಕಾ ಭಜಂತ್ರಿ, ವೀರೇಶ ಹುಣಶ್ಯಾಳ ಸೇರಿದಂತೆ ಶಾಲಾ ಮಕ್ಕಳು ಭಾಗವಹಿಸಿದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR